ಸಂಪುಟ : 10 ಸಂಚಿಕೆ: 25 ಪುಟ : 4+2 ಬೆಲೆ: 3.00 ಶನಿವಾರ ಫೆಬ್ರವರಿ 22 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 25 Pages : 4+2 Price : 3.00 Saturday February 22 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

ಮುಳಗುಂದ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿ ಇ-ಖಾತಾ ಆಂದೋಲನ

## ದಾಖಲಾತಿ ಪತ್ರಗಳನ್ನು ಸಲ್ಲಿಸಲು ಸೂಚನೆ

■ವಿಜಯಸಾಕ್ಷಿ ಸುದ್ದಿ, ಗದಗ

ಮುಳಗುಂದ ಪ.ಪಂ ವ್ಯಾಪ್ತಿಯಲ್ಲಿ ಅಧಿಕೃತ, ಅನಧಿಕೃತ ಕಟ್ಟಡಗಳ ಹಾಗೂ ನಿವೇಶನಗಳಿಗೆ 'ಎ' ಖಾತೆ ಮತ್ತು 'ಬಿ' ಖಾತೆ ನೀಡುವ ಕುರಿತು ಮೇ 10ರವರೆಗೆ ಇ-ಖಾತಾ ಅಂದೋಲನ ಹಮ್ಮಿಕೊಂಡಿದೆ. ಪಟ್ಟಣದಲ್ಲಿನ ಆಸ್ತಿ ಮಾಲೀಕರು ತಮ್ಮ ಕಟ್ಟಡ-ನಿವೇಶನಗಳಿಗೆ ಸಂಬಂಧಿಸಿದ ದಾಖಲಾತಿ ಪತ್ರಗಳನ್ನು ಕಛೇರಿಗೆ ಸಲ್ಲಿಸಿ ನಮೂನೆ-3 ಹಾಗೂ ನಮೂನೆ-3ಎ ಇ-ಖಾತಾ ನಮೂನೆಯನ್ನು ಪಡೆಯಬಹುದಾಗಿದೆ ಎಂದು ಪ.ಪಂ ಮುಖ್ಯಾಧಿಕಾರಿಗಳು ತಿಳಿಸಿದ್ದಾರೆ.

ಎ ರಿಜಿಸ್ಟರ್‌ನಲ್ಲಿ ದಾಖಲಿಸಿ ಆಸ್ತಿ ಇ-ಖಾತಾ (ನಮೂನೆ-3) ಪಡೆಯಲು ಆಸ್ತಿಗೆ ಸಂಬಂಧಿಸಿದ ಸ್ವತ್ತಿನ ಮಾಲೀಕತ್ವ ಸಾಬೀತುಪಡಿಸುವ ನೋಂದಾಯಿತ ಮಾರಾಟ ಪತ್ರ/ ದಾನ ಪತ್ರಗಳು ವಿಭಾಗ ಪತ್ರಗಳು/ ಸರ್ಕಾರ ಅಥವಾ ನಿಗಮ ಮಂಡಳಿಗಳಿಂದ ನೀಡಲಾದ ಹಕ್ಕು ಪತ್ರಗಳು/ ಕಂದಾಯ ಇಲಾಖೆಯಿಂದ ನೀಡಲಾದ ಹಕ್ಕು ಪತ್ರಗಳು, ಸ್ವತ್ತಿನ ಮಾಲೀಕರ ಪಾಸ್‌ಪೋರ್ಟ ಅಳತೆಯ ಭಾವಚಿತ್ರ, ಸ್ವತ್ತಿನ ಭಾವಚಿತ್ರ (ಜಿ.ಪಿ.ಎಸ್), ಮಾಲೀಕರ ಗುರುತಿನ ದಾಖಲೆ (ಮತದಾರರ ಗುರುತಿನ ಚೀಟಿ/ ಪ್ಯಾನ್ ಕಾರ್ಡ/ ಡ್ರೈವಿಂಗ್ ಲೈಸನ್ಸ್/ ಪಾಸ್‌ಪೋರ್ಟ್/ ಪಡಿತರ ಚೀಟಿ) ಇವುಗಳಲ್ಲಿ ಯಾವುದಾದರೊಂದು, ಸಕ್ಷಮ ಪ್ರಾಧಿಕಾರದಿಂದ ಪಡೆದ ಬಡಾವಣೆ ಅನುಮೋದನೆ ಪತ್ರ ಹಾಗೂ ಕೆ.ಜೆ.ಪಿ ನಕ್ಷೆ (ಹೊಸ ಬಡಾವಣೆ), ಚಾಲ್ತಿ ಸಾಲಿನ/ ಇತ್ತೀಚಿನ ಆಸ್ತಿ/ ಶುಲ್ಕ ರಶೀದಿ (ಹಿಂದಿನ ಸಾಲುಗಳ ತೆರಿಗೆ ಬಾಕಿ ಇದ್ದಲ್ಲಿ ಪಾವತಿಸುವುದು) ಪ್ರಸ್ತಿಕ ಸಾಲಿನ ವರೆಗಿನ ಋಣಭಾರ ಪತ್ರ ಸಲ್ಲಿಸಬೇಕಾಗುತ್ತದೆ.

ಬಿ ರಿಜಿಸ್ಟರ್‌ನಲ್ಲಿ ದಾಖಲಿಸಿ ಆಸ್ತಿ ಇ-ಖಾತಾ (ನಮೂನೆ-3ಎ) ಪಡೆಯಲು ಆಸ್ತಿಗೆ ಸಂಬಂಧಿಸಿದ ಸ್ವತ್ತಿನ ಮಾಲೀಕತ್ವ ಸಾಬೀತುಪಡಿಸುವ ದಿನಾಂಕ:10/09/2024ರ ಪೂರ್ವದಲ್ಲಿ ನೋಂದಾಯಿತ ಮಾರಾಟ ಪತ್ರ/ ದಾನ ಪತ್ರಗಳು ವಿಭಾಗ ಪತ್ರಗಳು/ ಹಕ್ಕು ಖುಲಾಸೆ ಪತ್ರಗಳು, ಸ್ವತ್ತಿನ ಮಾಲೀಕರ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ, ಸ್ವತ್ತಿನ ಭಾವಚಿತ್ರ (ಜಿ.ಪಿ.ಎಸ್). ಮಾಲೀಕರ ಗುರುತಿನ ದಾಖಲೆ (ಮತದಾರರ ಗುರುತಿನ ಚೀಟಿ/ ಪ್ಯಾನ್ ಕಾರ್ಡ/ ಡ್ರೈವಿಂಗ್ ಲೈಸನ್ಸ್/ ಪಾರ್ಸಪೋರ್ಟ/ ಪಡಿತರ ಚೀಟಿ) ಇವುಗಳಲ್ಲಿ ಯಾವುದಾದರೊಂದು, ಚಾಲ್ತಿ ಸಾಲಿನ/ ಇತ್ತೀಚಿನ ಆಸ್ತಿ ಶುಲ್ಕ ರಶೀದಿ (ಹಿಂದಿನ ಸಾಲುಗಳ ತೆರಿಗೆ ಬಾಕಿ ಇದ್ದಲ್ಲಿ ಪಾವತಿಸುವುದು) ಸಲ್ಲಿಸುವಂತೆ ಮುಖ್ಯಾಧಿಕಾರಿಗಳು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಕಛೇರಿಯ ಮುಖ್ಯಾಧಿಕಾರಿ/ಪ್ರ.ದ.ಕಂ.ನಿ/ಕ.ವ.ಸ ರವರನ್ನು ಸಹಾಯವಾಣಿ ಸಂಖ್ಯೆ-08372-251125 ಮತ್ತು ಮೊಬೈಲ್ ಸಂಖ್ಯೆ-9972708540, 8722762768, 9900951561 ವಾಟ್ಸಪ್ ಸಂಖ್ಯೆ-8722762768, ಇ-ಮೇಲ್: ka.mulagunda.tp@gmail.com ಮೂಲಕ ಸಂಪರ್ಕಿಸಬಹುದಾಗಿದೆ.

ಲಿಂ. ಡಾ.ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ 76ನೇ ಜಯಂತಿ, ಭಾವೈಕ್ಯತಾ ದಿನಾಚರಣೆ ಕಾರ್ಯಕ್ರಮದಲ್ಲಿ ಸಂಸದ ಬಸವರಾಜ ಬೊಮ್ಮಾಯಿ ಅಭಿಮತ

# ಹಿರಿಯ ಗುರುಗಳ ಜೀವನವೇ ಒಂದು ಸಂದೇಶ

■ವಿಜಯಸಾಕ್ಷಿ ಸುದ್ದಿ, ಗದಗ

ವೈಚಾರಿಕ ಕ್ರಾಂತಿಯ ಜೊತೆಗೆ ಸಾಮಾಜಿಕ ಕ್ರಾಂತಿ ಮಾಡಿದವರು ಗದಗಿನ ಲಿಂಗೈಕ್ಯ ಶ್ರೀ ಸಿದ್ದಲಿಂಗ ಸ್ವಾಮೀಜಿಗಳು. ಸಮಾಜದಲ್ಲಿ ಸಂಸ್ಕೃತಿ, ಸಂಸ್ಕಾರ ಉಳಿಯಲು ವೀರಶೈವ ಲಿಂಗಾಯತ ಮಠಗಳ ಪಾತ್ರ ದೊಡ್ಡದು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಗದಗ ತೋಂಟದಾರ್ಯ ಮಠದ ಲಿಂಗೈಕ್ಯ ಡಾ.ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ 76ನೇ ಜಯಂತಿ ಹಾಗೂ ಭಾವೈಕ್ಯತಾ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಅವರು ಮಾತನಾಡಿದರು.

ಗದಗಿನ ಇತಿಹಾಸದಲ್ಲಿ ಒಂದು ವಿನೂತನವಾದ ಅಧ್ಯಾಯವನ್ನು ಬರೆದಿಟ್ಟು ನಮ್ಮೆಲ್ಲರಿಗೂ ಸದಾಕಾಲ ಮಾರ್ಗದರ್ಶನ ಮಾಡುತ್ತಿರುವ ಲಿಂ. ತೋಂಟದ ಸಿದ್ದಲಿಂಗ ಮಹಾಸ್ವಾಮಿಯನ್ನು ಭಕ್ತಿ ಭಾವದಿಂದ ಸ್ಮರಣೆ ಮಾಡಬೇಕು ಎಂದರು.

ಗಾಂಧೀಜಿ ನನ್ನ ಜೀವನವೇ ಒಂದು ಸಂದೇಶ ಅಂತ ಹೇಳಿದ್ದರು. ಅದೇ ರೀತಿ ನಮ್ಮ ಹಿರಿಯ ಗುರುಗಳ ಜೀವನವೇ ಒಂದು ಸಂದೇಶ. ಇತ್ತೀಚಿನ ದಿನಗಳಲ್ಲಿ ಆದರ್ಶ, ಆಧ್ಯಾತ್ಮಿಕ ಜೀವನ ನಡೆಸಿದವರು ಗದಗಿನ ಸಿದ್ದಲಿಂಗ ಮಹಾಸ್ವಾಮಿಗಳು. ಅವರ ಸಾಮಿಪ್ಯಕ್ಕೆ ಹೋದರೆ ಅವರ ಚಿಂತನೆ, ವಿಚಾರ, ಪ್ರೀತಿ-ವಿಶ್ವಾಸ ಅನುಭವಕ್ಕೆ



ಬರುತ್ತದೆ. ಸರಳವಾಗಿ ಸ್ಥಾನಿಕ ಭಾಷೆಯಲ್ಲಿ ಎಲ್ಲ ವಿಚಾರ ಹೇಳುತ್ತಿದ್ದರು. ಅವರ ಜನಪರ ಚಿಂತನೆ ಎಲ್ಲರ ಮೆಚ್ಚುಗೆಗೆ ಪಾತ್ರವಾಗಿತ್ತು. ಈ ಭಾಗದಲ್ಲಿ ವೈಚಾರಿಕ ಕ್ರಾಂತಿಯ ಜೊತೆಗೆ ಸಾಮಾಜಿಕ ಕ್ರಾಂತಿ ಮಾಡಿದವರು ಗದಗಿನ ಸ್ವಾಮೀಜಿಗಳು. ಸಮಾಜದಲ್ಲಿ ಅನಿಷ್ಠ ಪದ್ದತಿಗಳ ವಿರುದ್ಧ ಸಿದ್ದಲಿಂಗ ಸ್ವಾಮೀಜಿ ಹೋರಾಟ ಮಾಡಿದ್ದರಿಂದ ಈ ಭಾಗದಲ್ಲಿ ಸಂಸ್ಕೃತಿ-ಸಂಸ್ಕಾರ ಉಳಿದಿದೆ ಎಂದರು.

ಸಮಾಜದಲ್ಲಿ ಎರಡು ರೀತಿಯ ಸ್ವಾಮೀಜಿಗಳು ಇರುತ್ತಾರೆ. ಬದುಕಿನಿಂದ ದೂರವಾಗಿ ಹಿಮಾಲಯದಲ್ಲಿ ತಪಸ್ಸು ಮಾಡಿ ಜ್ಞಾನೋದಯ ಆಗಿದೆ ಎಂದು ಹೇಳುವ ಸ್ವಾಮಿಗಳು ಒಂದು ವರ್ಗವಾದರೆ, ಇದೇ ಸಮಾಜ-ಸಂಸಾರದಲ್ಲಿ ಇದ್ದು, ಬದುಕಿನ ಎಲ್ಲ ಸವಾಲುಗಳನ್ನು ಎದುರಿಸಿ ಆದರ್ಶ ಬದುಕು ನಡೆಸಿ ಮಾರ್ಗದರ್ಶನ ಮಾಡಿ, ಇಡೀ ಜಗತ್ತಿಗೆ ಬೆಳಕು ಕೊಡುವ ಬಸವ ತತ್ವ ಪಸರಿಸುವ ಸ್ವಾಮೀಜಿಗಳು ಇದ್ದಾರೆ ಎಂದರು.

ಪರಮಪೂಜ್ಯರು ಭಾವೈಕ್ಯತೆಯಲ್ಲಿ ಮುಂದು. ಹುಟ್ಟಿನಿಂದ ಯಾರೂ ಶ್ರೇಷ್ಠರಲ್ಲ. ಹುಟ್ಟಿನ ಮೂಲ ಮುಖ್ಯವಲ್ಲ. ಯಾರಿಗಾಗಿ ಹುಟ್ಟಿದ್ದೇವೆ ಎನ್ನುವುದು ಮುಖ್ಯವಲ್ಲ. ಯಾರಿಗಾಗಿ ಬದುಕುತ್ತಿದ್ದೇವೆ ಎನ್ನುವುದು ಮುಖ್ಯ, ಎಲ್ಲರಿಗಾಗಿ ಬದುಕುವುದು ಮುಖ್ಯ ಎಂದು ಪೂಜ್ಯರು ಹೇಳುತ್ತಿದ್ದರು. ಅವರ ಬಳಿ ಹೋದಾಗ ಹೊಸ ವಿಚಾರ ಕಲಿಯಲು ಅವಕಾಶ ಇತ್ತು. ಕಾಯಕದ ಬಗ್ಗೆ ಅವರ ಮಾತು, ಕೃಷಿ ಬೆಳೆದಿದೆ. ರಾಜಕಾರಣಿಗಳು ಮಾಡಬೇಕಾದ ಚಿಂತನೆಯನ್ನು ಸ್ವಾಮೀಜಿ ಮಾಡುತ್ತಿದ್ದರು. ರೈತನ ಬದುಕು ಹಸನು ಮಾಡಬೇಕು ಎನ್ನುವುದು ಪೂಜ್ಯರ ಬಯಕೆ ಆಗಿತ್ತು. ಸಮಾಜದ ಕಟ್ಟ ಕಡೆಯ ಜನರಿಗೆ ಸ್ವಾಭಿಮಾನದ ಬದುಕು ಕೊಟ್ಟವರು ಸ್ವಾಮೀಜಿ. ಅವರ ಪುಣ್ಯಾರಾಧನೆ ನಿರಂತರ ನಡೆಯಲಿ ಎಂದರು.

> ಬಸವ ತತ್ವ ಆಧಾರದಲ್ಲಿ ಶ್ರೀಮಠ ನೂರಾರು ವರ್ಷಗಳಿಂದ ನಡೆಯುತ್ತ ಬಂದಿದೆ. ಕಾಯಕ ಮತ್ತು ದಾಸೋಹದ ಮೂಲಕ ರಾಜ್ಯದಲ್ಲಿ ಮಠ-ಮಾನ್ಯಗಳು ಕೆಲಸ ಮಾಡುತ್ತಿವೆ. ರಾಜ್ಯದಲ್ಲಿ ಸಂಸ್ಕೃತಿ, ಸಂಸ್ಕಾರ ಇದ್ದರೆ ಅದಕ್ಕೆ ವೀರಶೈವ ಲಿಂಗಾಯತ ಮಠಗಳ ಪಾತ್ರ ಬಹಳ ದೊಡ್ಡದು. ನಮ್ಮ ಸರ್ಕಾರಗಳು ಮಾಡದ ಕೆಲಸವನ್ನು ಮಠಗಳು ಮಾಡುತ್ತಿವೆ. ಬ್ರಿಟೀಷರ ಕಾಲದಲ್ಲಿ ಹೆಣ್ಣುಮಕ್ಕಳಿಗೆ ಶಿಕ್ಷಣ ನೀಡುವ ಕೆಲಸವನ್ನು ಮಠಗಳು ಮಾಡಿವೆ. ಸಮಾನತೆ ಕೇವಲ ಮಾತಿನಲ್ಲಿ ಅಲ್ಲ, ಆಚರಣೆಯಲ್ಲಿ ತಂದಿರುವುದು ಮಠಗಳು. ಅಂತಹ ಶ್ರೇಷ್ಠ ಮಠಗಳ ಸಾಲಿನಲ್ಲಿ ಗದಗ ತೆ-ೋಂಟದಾರ್ಯ ಮಠ ಇದೆ ಎಂದು ಬಸವರಾಜ ಬೊಮ್ಮಾಯಿ ಹೇಳಿದರು.

▸▸3ನೇ ಪುಟಕ್ಕೆ

ಶೇಖರಗೌಡ ರಾಮತ್ನಾಳರಿಂದ ಶಿಕ್ಷಣ ಇಲಾಖೆಯ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆ

# 'ಶಾಲೆಯಲ್ಲಿದೆ ಶಿಕ್ಷಣದ ಜೊತೆ ರಕ್ಷಣೆ'

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಕ್ಕಳ ರಕ್ಷಣಾ ನಿರ್ದೇಶನಾಲಯ ಬೆಂಗಳೂರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಪೊಲೀಸ್ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಗದಗ ಇವರ ಸಹಯೋಗದಲ್ಲಿ ಶುಕ್ರವಾರ ಜಿಲ್ಲಾ ಮಟ್ಟದಲ್ಲಿ ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ 'ಶಾಲೆಯಲ್ಲಿದೆ ಶಿಕ್ಷಣದ ಜೊತೆ ರಕ್ಷಣೆ' ಎಂಬ ಶಿರ್ಷಿಕೆಯಡಿ ಉಚಿತ ಮತ್ತು ಕಡ್ಡಾಯ ಶಿಕ್ಷಣ ಕಾಯ್ದೆ-2009ರ ಅನುಷ್ಠಾನದ ಬಗ್ಗೆ ಪ್ರಗತಿ ಪರಿಶೀಲನಾ ಸಭೆಯನ್ನು ಹಮ್ಮಿಕೊಳ್ಳಲಾಗಿತ್ತು.

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶೇಖರಗೌಡ ರಾಮತ್ನಾಳ ಮಾತನಾಡಿ, ಫೋಕ್ಸೋ ಕಾಯ್ದೆಯಡಿ ಮಕ್ಕಳ ಮೇಲೆ ದೌರ್ಜನ್ಯ, ಬಾಲ್ಯ ವಿವಾಹ, ಜೀತ ಪದ್ಧತಿ ಪ್ರಕರಣಗಳು



ಕಂಡುಬಂದಲ್ಲಿ ಸಂಬಂಧಿತ ಅಧಿಕಾರಿಗಳು ತಕ್ಷಣವೇ ಸೂಕ್ತ ಕ್ರಮ ಕೈಗೊಳ್ಳಬೇಕು. ಶಾಲೆಯಲ್ಲಿ ಮಕ್ಕಳ ಹಾಜರಾತಿ ಪರಿಶೀಲಿಸಿದ ನಂತರ ದೀರ್ಘಕಾಲದವರೆಗೆ ಶಾಲೆ ಬಿಟ್ಟ ಮಕ್ಕಳ ವರದಿಯನ್ನು ಪ್ರತಿ ತಿಂಗಳು ಸಲ್ಲಿಸಬೇಕು ಎಂದರು.

ಬಾಲ್ಯ ವಿವಾಹ ನಿಷೇಧ ಕಾಯ್ದೆ, ಫೋಕ್ಸೋ, ಜೀತ ಪದ್ಧತಿ ನಿಷೇಧ ಕಾಯ್ದೆ, ಬಾಲ ಕಾರ್ಮಿಕ ನಿಷೇಧ ಕಾಯ್ದೆ ಕುರಿತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕಗಳ ಸಹಯೋಗದಲ್ಲಿ ಗ್ರಾಮೀಣ ಸೇರಿದಂತೆ ಜಿಲ್ಲಾ ಮಟ್ಟದಲ್ಲಿಯೂ ಜಾಗೃತಿ ಮೂಡಿಸುವ ಕಾರ್ಯಕ್ರಮಗಳು ಪರಿಣಾಮಕಾರಿಯಾಗಿ ಜರುಗಬೇಕು. ಶಾಲೆಗಳಲ್ಲಿ ಸಲಹಾ ಪೆಟ್ಟಿಗೆ ಮತ್ತು ಮಕ್ಕಳ ಸಹಾಯವಾಣಿ ಕಡ್ಡಾಯವಾಗಿ ಅಳವಡಿಸಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರುಡಿ, ಶಿಕ್ಷಣ ಇಲಾಖೆಯ ಅಧಿಕಾರಿಗಳು, ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಇದ್ದರು.

> ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಧಿಕಾರಿ ರಫೀಕಾ ಹಳ್ಳೂರು ಮಾತನಾಡಿ, ಶೋಷಣೆಗೆ ಒಳಗಾದ ಮಕ್ಕಳ ರಕ್ಷಣೆ ಮತ್ತು ಪುರ್ನವಸತಿ ಕಲ್ಪಿಸುವುದು ಇಲಾಖೆಯ ಮೊದಲ ಆದ್ಯತೆಯಾಗುತ್ತದೆ. ಗ್ರಾಮೀಣ ಭಾಗದಲ್ಲಿ ಬಾಲ್ಯ ವಿವಾಹಗಳನ್ನು ತಡೆಗಟ್ಟುವಲ್ಲಿ ಕ್ರಮ ಕೈಗೊಳ್ಳಲಾಗುವುದು. ಬಾಲ್ಯ ವಿವಾಹ ಕಂಡುಬಂದರೆ ಸಂಬಂಧಿತ ಕುಟುಂಬದವರನ್ನು ಹೊಣೆಗಾರರನ್ನಾಗಿ ಮಾಡಿ ತಪ್ಪಿತಸ್ಥರ ವಿರುದ್ಧ ಸೂಕ್ತ ಕ್ರಮವನ್ನು ಕೈಗೊಳ್ಳಬೇಕು ಎಂದರು.

ಉಚಿತ ನೇತ್ರ ತಪಾಸಣೆ, ಶಸ್ತ್ರಚಿಕಿತ್ಸಾ ಶಿಬಿರ ಉದ್ಘಾಟಿಸಿದ ಶಾಸಕ ಡಾ. ಚಂದ್ರು ಲಮಾಣಿ

# ಕಣ್ಣಿನ ಆರೋಗ್ಯದ ಕಾಳಜಿಯಿರಲಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮನುಷ್ಯನ ಪಂಚೇಂದ್ರಿಯಗಳಲ್ಲಿ ಕಣ್ಣು ಅತಿ ಮುಖ್ಯ ಅಂಗವಾಗಿದೆ. ಕಣ್ಣಿನ ಆರೋಗ್ಯ ಕಾಳಜಿಯಿಂದ ಕಾಪಾಡಿಕೊಳ್ಳುವುದು ಮುಖ್ಯವಾಗಿದೆ ಶಾಸಕ ಡಾ.ಚಂದ್ರು ಲಮಾಣಿ ಹೇಳಿದರು.

ಅವರು ಪಟ್ಟಣದ ಜ್ಯೋತಿ ನರ್ಸಿಂಗ್ ಹೋಮ್‌ನಲ್ಲಿ ಶಿವಮೊಗ್ಗದ ಶಂಕರ ಕಣ್ಣಿನ ಆಸ್ಪತ್ರೆ, ಲಕ್ಷ್ಮೇಶ್ವರ ತಾಲೂಕಾ ವೈದ್ಯರ ಸಂಘ, ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆ, ಪುರಸಭೆ, ವಿಶ್ವ ಕಂಪ್ಯೂಟರ್ ಅಕಾಡೆಮಿ, ಕರ್ನಾಟಕ ರಾಜ್ಯ ಹಿರಿಯ ನಾಗರಿಕರ ಹಾಗೂ ನಿವೃತ್ತ ನೌಕರರ ಸಂಘ, ಔಷಧ ವ್ಯಾಪಾರಸ್ಥರ ಸಂಘ ಹಾಗೂ ವಿಶ್ವ ಆರೋಗ್ಯ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಶುಕ್ರವಾರ ನಡೆದ ಉಚಿತ ನೇತ್ರ ತಪಾಸಣೆ ಹಾಗೂ ಶಸ್ತ್ರಚಿಕಿತ್ಸಾ ಶಿಬಿರ ಉದ್ಘಾಟಿಸಿ ಮಾತನಾಡಿದರು.

ಕಣ್ಣಿನ ಸಮಸ್ಯೆಯನ್ನು ನಿರ್ಲಕ್ಷಿಸಬಾರದು. ದೃಷ್ಟಿದೋಷ ಉಂಟಾದ ಕೂಡಲೇ ಆಸ್ಪತ್ರೆಗೆ ಹೋಗಿ ಪರೀಕ್ಷಿಸಿಕೊಂಡು ವೈದ್ಯರ ಸಲಹೆಯನ್ನು ತಪ್ಪದೇ ಪಾಲಿಸಬೇಕು. ಗ್ರಾಮೀಣ ಭಾಗದ ಬಡವರಿಗೆ ಉಚಿತವಾಗಿ ಕಣ್ಣಿನ ತಪಾಸಣೆ ಮಾಡುತ್ತಿರುವ ವೈದ್ಯರು, ಸಂಘಟನೆಗಳ ಸೇವಾ ಕಾರ್ಯ ಶ್ಲಾಘನೀಯ. ಮುಂದಿನ ದಿನಗಳಲ್ಲಿ ಗ್ರಾಮೀಣ ಭಾಗದಲ್ಲಿ ಇಂತಹ ಶಿಬಿರಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ನಡೆಸಲು ಪ್ರೇರಣೆಯಾಗಿದೆ ಎಂದರು.




ಧರ್ಮಸ್ಥಳ ಸಂಘದ ಯೋಜನಾದಿಕಾರಿ ಪುನೀತ್ ಓಲೇಕಾರ ಮಾತನಾಡಿ, ನೇತ್ರದಾನ ಮಹಾದಾನವಾಗಿದ್ದು, ನಾವು ಅಳಿದ ಮೇಲೆ ಮತ್ತೊಬ್ಬರಿಗೆ ದಾನ ಮಾಡುವ ಮೂಲಕ ಮಾನವೀಯತೆ ತೋರಬೇಕಾಗಿದೆ. ನಮ್ಮ ಸಮಾಜದಲ್ಲಿ ಕಣ್ಣು ಇಲ್ಲದೆ ಬಳಲುತ್ತಿರುವ ಸಾವಿರಾರು ಜನರಿದ್ದಾರೆ. ಅಂತವರಿಗೆ ಕಣ್ಣು ದಾನ ಮಾಡುವ ಮೂಲಕ ಅವರಿಗೆ ಬೆಳಕಾಗುವ ಕಾರ್ಯ ಮಾಡಲು ನಮ್ಮ ನೇತ್ರವನ್ನು ಸರಿಯಾಗಿ ಕಾಪಾಡಿಕೊಳ್ಳುವುದು ಅಗತ್ಯವಾಗಿದೆ ಎಂದರು.

ಡಾ. ಪಿ.ಡಿ. ತೋಟದ, ವಿಶ್ವ ಅರೋಗ್ಯ ಸಂಸ್ಥೆಯ ತಾಲೂಕಾಧ್ಯಕ್ಷ ಬಸವರಾಜ ಸಂಗಪ್ಪಶೆಟ್ಟರ, ಹಿರಿಯ ನಾಗರಿಕರ ಹಾಗೂ ನಿವೃತ್ತ ನೌಕರ ಸಂಘ ಅಧ್ಯಕ್ಷ ಸಿ.ಆರ್. ಲಕ್ಕುಂಡಿಮಠ, ಡಾ. ಪ್ರಸನ್ನ ಕುಲಕರ್ಣಿ, ಎನ್.ವಿ. ಹೇಮಗಿರಿಮಠ, ಡಾ. ಶರಣಪ್ಪ ಬಿಂಕದಕಟ್ಟಿ, ಡಾ. ಎಮ್.ಆರ್. ಕಲಿವಾಳಮಠ, ಡಾ. ದೀಪಾ ಬಿಂಕದಕಟ್ಟಿ, ಡಾ. ನಾಗರಾಜ ವಾಲಿ, ಡಾ. ಎಸ್.ಜಿ. ಹೂವಿನ, ಡಾ. ಎ.ಎಚ್. ಅಮರಶೆಟ್ಟಿ, ಪ್ರಕಾಶ ಉಪನಾಳ, ಗೌರಿ ಸಂಗಪ್ಪ ಶೆಟ್ಟರ, ಧರ್ಮಸ್ಥಳ ಸಂಘ ಮೇಲ್ವಿಚಾರಕರಾದ ಶ್ರುತಿ, ರೇಣುಕಾ, ಶಂಕರ ಕಣ್ಣಿನ ಆಸ್ಪತ್ರೆ ಸಿಬ್ಬಂದಿ ಇದ್ದರು.

> ಶಿವಮೊಗ್ಗದ ಶಂಕರ ಕಣ್ಣಿನ ಆಸ್ಪತ್ರೆಯ ನೇತ್ರತಜ್ಞ ಡಾ. ನಿತೇಶ ಅವರನ್ನೊಳಗೊಂಡ 10 ಸಹಾಯಕ ವೈದರ ತಂಡ ತಪಾಸಣೆ ಶಿಬಿರದಲ್ಲಿ ಪಾಲ್ಗೊಂಡಿದ್ದರು. ನೇತ್ರದೋಷವುಳ್ಳ ಒಟ್ಟು 310 ಜನರು ತಪಾಸಣೆಗೊಂಡರು. ಅದರಲ್ಲಿ 42 ಜನ ದೃಷ್ಟಿದೋಷವುಳ್ಳವರು ಶಸ್ತ್ರಚಿಕಿತ್ಸೆಗೆ ಆಯ್ಕೆಯಾದರು.

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಜನ ಆರೋಗ್ಯ ಕೇಂದ್ರ ಎಪಿಡಿಮಿಯಾಲಜಿ ವಿಭಾಗ ರಾಷ್ಟ್ರೀಯ ಆರೋಗ್ಯ ಮತ್ತು ನರ ವಿಜ್ಞಾನ ಸಂಸ್ಥೆ, ಬೆಂಗಳೂರು (ನಿಮ್ಹಾನ್ಸ್) ಇವರ ಸಹಯೋಗದೊಂದಿಗೆ ಆರಂಭಿಸಲಾಗಿರುವ ಯುವ ಸ್ಪಂಧನ ಕೇಂದ್ರದಲ್ಲಿ ಮುಂಡರಗಿ ಹಾಗೂ ನರಗುಂದ ತಾಲೂಕಿನಲ್ಲಿ ತಲಾ 01 ಯುವ ಪರಿವರ್ತಕರ ಹುದ್ದೆ ಖಾಲಿ ಇದ್ದು, ಸದರಿ ಹುದ್ದೆಯಲ್ಲಿ ಕಾರ್ಯನಿರ್ವಹಿಸಲು ಇಚ್ಛಿಸುವವರು ಈ ಕೆಳ ಕಾಣಿಸಿದ ಅರ್ಹತೆಯನ್ನು ಹೊಂದಿರತಕ್ಕದ್ದು.

ಅರ್ಹತೆಗಳು ಯುವ ಪರಿವರ್ತಕರ ಹುದ್ದೆಗೆ ಕಾರ್ಯನಿರ್ವಹಿಸಲು ಇಚ್ಛಿಸುವವರು ಪದವೀಧರರಾಗಿರಬೇಕು ಹಾಗೂ 35 ವರ್ಷದೊಳಗಿನ ಮಹಿಳೆಯರಾಗಿರಬೇಕು. ವಾಕ್ ಚಾತುರ್ಯ ಹೊಂದಿರಬೇಕು. ಕಂಪ್ಯೂಟರ ಜ್ಞಾನ ಹಾಗೂ ಟೈಪಿಂಗ್ ಕೌಶಲ್ಯ ಹೊಂದಿರಬೇಕು. ಆಸಕ್ತ ಯುವಕ/ಯುವತಿಯರು ತಮ್ಮ ಸ್ವ-ವಿವರಗಳೊಂದಿಗೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಗದಗ ಇಲ್ಲಿ ಫೆಬ್ರವರಿ 28 ರೊಳಗೆ ಅರ್ಜಿಯನ್ನು ಸಲ್ಲಿಸಬಹುದು, ಆಯ್ಕೆಯಾದ ಅಭ್ಯರ್ಥಿಗೆ ಬೆಂಗಳೂರಿನ ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರ ವಿಜ್ಞಾನ ಸಂಸ್ಥೆ, ಬೆಂಗಳೂರು (ನಿಮ್ಹಾನ್ಸ್) ಇಲ್ಲಿ ತರಬೇತಿ ನೀಡಲಾಗುವುದು. ಆಯ್ಕೆಯಾದ ಯುವ ಪರಿವರ್ತಕರಿಗೆ ಗೌರವ ಸಂಭಾವನೆ ಹಾಗೂ ಪ್ರವಾಸ ಭತ್ಯೆ ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಮೊ.ಸಂ 7349223455 ಕಛೇರಿ ದೂ.ಸಂಖ್ಯೆ 08372-238345 ಗೆ ಸಂಪರ್ಕಿಸಬಹುದು.

ದಿಶಾ ಸಮಿತಿ ಸಭೆಯಲ್ಲಿ ಸಂಸದ ಬಸವರಾಜ ಬೊಮ್ಮಾಯಿ ಸೂಚನೆ

# ಯೋಜನೆಗಳು ಸಮರ್ಪಕವಾಗಿ ತಲುಪಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದಿಂದ ವಿವಿಧ ಇಲಾಖೆಗಳಿಗೆ ಯೋಜನೆಗಳ ಅನುಷ್ಠಾನದಲ್ಲಿ ನಿಗದಿಪಡಿಸಿದ ಆರ್ಥಿಕ ಹಾಗೂ ಭೌತಿಕ ಗುರಿ ಸಾಧಿಸಬೇಕು. ಜನಸಾಮಾನ್ಯರಿಗೆ ಯೋಜನೆ ಫಲಪ್ರದವಾಗಿ ತಲುಪಬೇಕು ಎಂದು ಸಂಸದ ಬಸವರಾಜ್ ಬೊಮ್ಮಾಯಿ ಸೂಚಿಸಿದರು.

ಜಿಲ್ಲಾಡಳಿತ ಭವನದಲ್ಲಿ ಶುಕ್ರವಾರ ಜರುಗಿದ ದಿಶಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಿವೇಶನ ಹಂಚಿಕೆಯ ಕುರಿತಂತೆ ಕಳೆದ ಬಾರಿ ಸಭೆಯಲ್ಲಿ ತಿಳಿಸಿದಂತೆ ಈವರೆಗೆ ಎಷ್ಟು ನಿವೇಶನಗಳನ್ನು ಹಂಚಿ ಎಷ್ಟು ಉಳಿದಿವೆ ಮಾಹಿತಿ ನೀಡುವಂತೆ ಸಂಸದರು ಸೂಚಿಸಿದರು. ಇದಕ್ಕೆ ನಗರಾಭಿವೃದ್ಧಿ ಪ್ರಾಧಿಕಾರದ ಕಾರ್ಯಪಾಲಕ ಅಭಿಯಂತರ ಶರಣಪ್ಪ ಮಾಹಿತಿ ನೀಡುತ್ತಿದ್ದಂತೆ, ಅಸಮರ್ಪಕ ಮಾಹಿತಿಯೊಂದಿಗೆ ಸಭೆ ಹಾಜರಾಗುವುದು ಸರಿಯಲ್ಲ ಎಂದು ಎಚ್ಚರಿಕೆ ನೀಡಿದರು.



ಕಳೆದ 10 ವರ್ಷದಲ್ಲಿ 4548 ಮನೆಗಳು ಅನುಮೋದನೆಯಾಗಿದ್ದು ಪೂರ್ಣವಾಗಿಲ್ಲ. ಯಾವ ತರಹ ಕೆಲಸ ನಿರ್ವಹಿಸುತ್ತೀರಿ, ಈ ವಿಳಂಬಕ್ಕೆ ಹೊಣೆ ಯಾರು ಎಂದು ಸಂಸದರು ಅಧಿಕಾರಿಗಳನ್ನು ಪ್ರಶ್ನಿಸಿದರು. ಮುಂಡರಗಿಯಲ್ಲಿ 385, ನರಗುಂದದಲ್ಲಿ 129 ಮನೆಗಳು ಪೂರ್ಣವಾಗಿಲ್ಲ.

ಈ ಕುರಿತಂತೆ ಅಧಿಕಾರಿಗಳು, ಸಂಬಂಧಿಸಿದ ಶಾಸಕರ ಗಮನಕ್ಕೆ ತಂದು ಚರ್ಚೆ ಮಾಡಿದ್ದೀರಾ ಎಂದು ಕೇಳಿದರು. ಅಧಿಕಾರಿ ವರ್ಗ ಜನಸಾಮಾನ್ಯರಿಗೆ ಯೋಜನೆಗಳನ್ನು ಸುಲಭವಾಗಿ ತಲುಪಿಸುವಲ್ಲಿ ವಿಳಂಬ ಧೋರಣೆ ಅನುಸರಿಸುತ್ತಿರುವುದು ಸರಿಯಲ್ಲ ಎಂದು ಹೇಳಿದರು.

ಗದಗ-ಬೆಟಗೇರಿ ಅವಳಿ ನಗರದ ನೀರ ಸರಬರಾಜು ಕುರಿತಂತೆ ಪೌರಾಯುಕ್ತ ರಾಜಾರಾಮ್ ಪವಾರ್ ಅವರು ಮಾಹಿತಿ ನೀಡುತ್ತಾ, ನಗರದಲ್ಲಿ 5-6 ದಿನಕ್ಕೊಮ್ಮೆ ನೀರು ನೀಡಲಾಗುತ್ತದೆ. ಪೈಪ್‌ಲೈನ್, ವಾಲ್ ಅಳವಡಿಕೆ ಕುರಿತು ಕ್ರಿಯಾಯೋಜನೆ ಸಿದ್ಧಪಡಿಸಿದ್ದೇವೆ ಎಂದು ಸಭೆಗೆ ಮಾಹಿತಿ ಒದಗಿಸಿದರು.

> ಅತ್ಯಂತ ಹಿಂದುಳಿದ ತಾಲೂಕಿನಲ್ಲಿರುವ ಶಾಲೆಯಲ್ಲಿ ಅತಿಥಿ ಶಿಕ್ಷಕರನ್ನು ನಿಯೋಜಿಸಿದ ನಂತರವೂ ವಿಜ್ಞಾನ, ಗಣಿತ, ಇಂಗ್ಲಿಷ್ ವಿಷಯಗಳಿಗೆ ಪರಿಣಿತರಿಂದ ಬೋಧನೆ ಕೈಗೊಳ್ಳಿ. ಬೋಧಕರಿಗೆ ತಮ್ಮ ಟ್ರಸ್ಟ್‌ನಿಂದ ಹಣ ಒದಗಿಸಲಾಗುವುದು.
> – ಬಸವರಾಜ ಬೊಮ್ಮಾಯಿ.
> ಗದಗ-ಹಾವೇರಿ ಸಂಸದರು.

> ನರಗುಂದ ಶಾಸಕ ಸಿ.ಸಿ. ಪಾಟೀಲ ಮಾತನಾಡಿ, ನಗರಸಭೆಯಲ್ಲಿ ನೀವು ಯಶಸ್ವಿ ಪೌರಾಯುಕ್ತರಾಗಲು ಮೊದಲು ನೀರಿನ ಪ್ರಮುಖ ಪೈಪ್‌ಲೈನ್‌ಗೆ ಇರುವ ನೇರ ಕನೆಕ್ಷನ್ ಕಟ್ ಮಾಡಬೇಕು. ವಿನಾಕಾರಣ ನೀರು ಪೋಲಾಗುವುದನ್ನು ತಡೆದರೆ, ನಿಯಮಿತವಾಗಿ ನೀರು ಸರಬರಾಜು ಮಾಡಬಹುದು. ಕೇಂದ್ರ ಸರ್ಕಾರದಿಂದ ನರಗುಂದ ವಿಧಾನಸಭಾ ಕ್ಷೇತ್ರದಲ್ಲಿ ಕೃಷಿಕರಿಗೆ ತರಬೇತಿ ನಡೆಸಲು ಆದೇಶಿಸಲಾಗಿದೆ. ತರಬೇತಿಯನ್ನು ಆದಷ್ಟು ಬೇಗ ಪ್ರಾರಂಭಿಸಬೇಕು ಎಂದು ತಿಳಿಸಿದರು.

▸▸3ನೇ ಪುಟಕ್ಕೆ

# ಕಾರ್ಖಾನೆಗಳ ಉದ್ಯೋಗ ಸೃಷ್ಟಿ ಕೇವಲ ಭ್ರಮೆ



■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಸಮೀಪದ ಗ್ರಾಮಗಳಲ್ಲಿ ಈಗಾಗಲೇ ಸ್ಥಾಪನೆಯಾಗಿರುವ ಕಾರ್ಖಾನೆಗಳಿಂದ ಮತ್ತು ಈಗ ಹೊಸದಾಗಿ ಆರಂಭವಾಗುತ್ತಿರುವ ಬಿಎಸ್‌ಪಿಎಲ್ ಕಾರ್ಖಾನೆಗಳಿಂದ ಇಲ್ಲಿ ಯಾವುದೇ ಉದ್ಯೋಗ ಸೃಷ್ಟಿ ಆಗುವದಿಲ್ಲ. ಅದು ಕೇವಲ ಭ್ರಮೆ ಎಂದು ಪ್ರಿಂಟರ್ಸ್ ಮಾಲೀಕರು ಬಂದ್‌ಗೆ ಬೆಂಬಲ ನೀಡಿದ್ದಾರೆ.

ಕಲ್ಯಾಣ ಕರ್ನಾಟಕ ಪ್ರಿಂಟರ್ಸ್ ಅಸೋಸಿಯೇಷನ್ ಸಂಚಾಲಕ ಮಂಜುನಾಥ ಜಿ.ಗೊಂಡಬಾಳ ಮತ್ತು ಕೊಪ್ಪಳ ಜಿಲ್ಲಾ ಮುದ್ರಣ ಮಾಲಿಕರ ಸಂಘದ ಜಿಲ್ಲಾಧ್ಯಕ್ಷ ಶ್ರೀಶೈಲಪ್ಪ ನಿಡಶೇಸಿ ಜಂಟಿ ಹೇಳಿಕೆ ನೀಡಿ, ಕೊಪ್ಪಳ ಮತ್ತು ಭಾಗ್ಯನಗರದಲ್ಲಿರುವ ಎಲ್ಲಾ ಮುದ್ರಣಕಾರರು ಬಂದ್‌ಗೆ ಬೆಂಬಲ ನೀಡಿದ್ದು, ಫೆ. 22ರಂದು ಜಿಲ್ಲಾ ಬಚಾವೋ ಆಂದೋಲನ ಸಮಿತಿ ಮೂಲಕ ನಡೆಯುವ ವಿಚಾರ ಸಂಕಿರಣ ಮತ್ತು ಫೆ. 24ರ ಪರಿಸರ ಹಿತರಕ್ಷಣಾ ವೇದಿಕೆಯ ಬಂದ್‌ಗೆ ಸಂಪೂರ್ಣ ಬೆಂಬಲ ಘೋಷಿಸಿದ್ದಾರೆ.

ಬೃಹತ್ ಕೈಗಾರಿಗಳಿಂದಾದ ಪರಿಸರ ಮಾಲಿನ್ಯವಾಗುತ್ತದೆ. ಇಲ್ಲಿನ ಕಾರ್ಖಾನೆಗಳು ಕಳೆದ 20-25 ವರ್ಷಗಳಿಂದ ಇಲ್ಲಿಯೇ ಉದ್ಯೋಗ ಸೃಷ್ಟಿಯ ಹುಸಿ ಭರವಸೆ ನೀಡುತ್ತಿದ್ದು, ಅವರೆಲ್ಲರೂ ಪ್ರಿಂಟಿಂಗ್ ಕೆಲಸಗಳನ್ನು ಸಹ ಬೇರೆ ಜಿಲ್ಲೆಗಳಲ್ಲಿ ಮಾಡಿಸುತ್ತಾರೆ. ನಮ್ಮ ಕೊಪ್ಪಳದ ಪ್ರಿಂಟಿಂಗ್ ಪ್ರೆಸ್‌ನವರಿಗೆ ಕೆಲಸ ಕೊಟ್ಟಿಲ್ಲ ಎಂದಿದ್ದಾರೆ.

## ರಾಷ್ಟ್ರ ನಿರ್ಮಾಣಕ್ಕೆ ಉತ್ತಮ ನಾಗರಿಕರ ಅಭಿವೃದ್ಧಿ ಅಗತ್ಯ: ಪ್ರಧಾನಿ ಮೋದಿ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ರಾಷ್ಟ್ರ ನಿರ್ಮಾಣಕ್ಕೆ ಉತ್ತಮ ನಾಗರಿಕರ ಅಭಿವೃದ್ಧಿ ಅಗತ್ಯ ಎಂದು ಪ್ರಧಾನಿ ಮೋದಿ ಹೇಳಿದ್ದಾರೆ. ಭಾರತ್ ಮಂಟಪದಲ್ಲಿ ಆಯೋಜಿಸಿದ್ದ ಸ್ಕೂಲ್ ಆಫ್ ಅಲ್ಟಿಮೇಟ್ ಲೀಡರ್‌ಶಿಪ್ (ಸೋಲ್) ಲೀಡರ್‌ಶಿಪ್ ಕಾನ್ ಕ್ಲೇವನ್ ಮೊದಲ ಆವೃತ್ತಿಯನ್ನು ಉದ್ಘಾಟಿಸಿ ಮಾತನಾಡಿದ ಅವರು, ರಾಷ್ಟ್ರ ನಿರ್ಮಾಣಕ್ಕೆ ಉತ್ತಮ ನಾಗರಿಕರ ಅಭಿವೃದ್ಧಿ ಅಗತ್ಯ, ವೈಯಕ್ತಿಕ ಅಭಿವೃದ್ಧಿಯ ಮೂಲಕ ರಾಷ್ಟ್ರ ನಿರ್ಮಾಣ, 'ಜನರಿಂದ ಜಗತ್ತು', ಯಾವುದೇ ಎತ್ತರವನ್ನು ಸಾಧಿಸಲು, ಅದು ಜನರಿಂದ ಮಾತ್ರ ಪ್ರಾರಂಭವಾಗುತ್ತದೆ.

ಇದಕ್ಕಾಗಿ ಉತ್ತಮ ನಾಯಕರ ಅಭಿವೃದ್ಧಿ ಅಗತ್ಯವಾಗಿದೆ, ಆದ್ದರಿಂದ 'ಸ್ಕೂಲ್ ಆಫ್ ಅಲ್ಟಿಮೇಟ್ ಲೀಡರ್‌ಶಿಪ್' ಸ್ಥಾಪನೆಯು ಭಾರತದ ಅಭಿವೃದ್ಧಿ ಪ್ರಯಾಣದಲ್ಲಿ ಒಂದು ಪ್ರಮುಖ ಮತ್ತು ದೊಡ್ಡ ಹೆಜ್ಜೆಯಾಗಿದೆ ಎಂದರು.

### ಮಕ್ಕಳೇ ನಿರ್ವಹಿಸುವ ಸ್ಕೂಲ್ ಬ್ಯಾಂಕ್ ಆಫ್ ಗ್ರಾಮ ಪಂಚಾಯಿತಿಗೆ ಚಾಲನೆ

# ಹೊಳೆ ಮಣ್ಣೂರ ಶಾಲೆಯಲ್ಲಿ SBGP ಬ್ಯಾಂಕ್ ಸ್ಥಾಪನೆ

■ವಿಜಯಸಾಕ್ಷಿ ಸುದ್ದಿ, ರೋಣ

ಓದು-ಬರಹ ಗೊತ್ತಿದ್ದರೂ ಸಹ ಬ್ಯಾಂಕ್‌ನಲ್ಲಿ ಹೋದಾಗ ಅಲ್ಲಿ ಹಣ ತುಂಬುವ, ತೆಗೆಯುವ ಚಲನ್ ಭರ್ತಿ ಮಾಡುವಂತೆ ಗೋಗೆರೆಯುವ ಕೆಲವರನ್ನು ಕಾಣುತ್ತೇವೆ. ಆದರೆ ಈ ಶಾಲೆಯ ಮಕ್ಕಳಿಗೆ ಅದೇ ಬ್ಯಾಂಕಿಂಗ್ ವ್ಯವಸ್ಥೆಯನ್ನು ಶಾಲೆ ಕಲಿಯುವಾಗಲೇ ನೀಡುತಿದ್ದಾರೆ. ಜೊತೆಗೆ ಶಾಲೆಯ ಮಕ್ಕಳೇ ಬ್ಯಾಂಕ್ ನಡೆಸಿಕೊಂಡು ಹೋಗುತ್ತಿದ್ದಾರೆ ಎಂದರೆ ಹೊಸ ವಿಷಯವಲ್ಲವೇ? ಅದುವೇ ಖಃಉಃಕ. ಇದು ಮಕ್ಕಳೇ ನಿರ್ವಹಿಸುವ ಮಾದರಿ ಸ್ಕೂಲ್ ಬ್ಯಾಂಕ್!



ಕಾರ್ಯ ನಿರ್ವಾಹಕ ಅಧಿಕಾರಿಗಳಾದ ಚಂದ್ರಶೇಖರ ಬಿ.ಕಂದಕೂರ ಅವರು ಸ್ಕೂಲ್ ಬ್ಯಾಂಕ್ ಆಫ್ ಗ್ರಾಮ ಪಂಚಾಯತ್ ಖಃಉಃಕಗೆ ಹೊಳೆ ಮಣ್ಣೂರಿನ ಸರ್ಕಾರಿ ಪ್ರೌಢಶಾಲೆಯಲ್ಲಿ ಚಾಲನೆ ನೀಡಿದರು. ಮಕ್ಕಳಲ್ಲಿ ವಿದ್ಯಾರ್ಥಿ ದೆಸೆಯಿಂದಲೇ ಉಳಿತಾಯದ ಮನೋಭಾವ ಬೆಳೆಸುವುದು ಹಾಗೂ ಬ್ಯಾಂಕಿಂಗ್/ಹಣಕಾಸಿನ ವಿಷಯದ ಕುರಿತು ಜಾಗೃತಿ ಮೂಡಿಸುವುದು ಇತ್ಯಾದಿ ಮಹತ್ತರ ಉದ್ದೇಶಗಳೊಂದಿಗೆ ಗ್ರಾಮ ಪಂಚಾಯಿತಿಯು ವಿದ್ಯಾರ್ಥಿಗಳಿಗಾಗಿ ಬ್ಯಾಂಕ್ ಸ್ಥಾಪನೆ ಮಾಡಿರುವುದು ಶ್ಲಾಘನೀಯ ಕಾರ್ಯ ಎಂದು ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

ಹೊಳೆಮಣ್ಣೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಒಂದು ಸರಕಾರಿ ಪ್ರೌಢಶಾಲೆ ಹಾಗೂ ಎರಡು ಸರಕಾರಿ ಹಿರಿಯ ಪ್ರಾಥಮಿಕ ಶಾಲೆಗಳು ಸೇರಿದಂತೆ ಒಟ್ಟು ಮೂರು ಶಾಲೆಗಳಲ್ಲಿ 458 ವಿದ್ಯಾರ್ಥಿಗಳಿದ್ದಾರೆ. ಎಲ್ಲರಿಗೂ ಪಾಸ್‌ಬುಕ್ ವಿತರಿಸುವ ವ್ಯವಸ್ಥೆಯನ್ನು ಗ್ರಾಮ ಪಂಚಾಯತಿಯಿಂದ ಮಾಡಿಕೊಳ್ಳಲಾಗಿದೆ. ಈಗಾಗಲೇ ಶೇ.50ಕ್ಕಿಂತ ಹೆಚ್ಚು ವಿದ್ಯಾರ್ಥಿಗಳು SBGP ಯಲ್ಲಿ ತಮ್ಮ ಖಾತೆ ತೆರೆದಿದ್ದು, ಬ್ಯಾಂಕ್ ಪಾಸ್‌ಬುಕ್ ವಿತರಿಸಲಾಗಿದೆ. ಪ್ರತಿಯೊಬ್ಬ ವಿಧ್ಯಾರ್ಥಿಯ ಖಾತೆದಾರರಿಗೂ ಒಂದು ಪಾಸ್‌ಬುಕ್ ನೀಡಲಾಗುತ್ತದೆ ಹಾಗೂ ಅವರ ಬಳಿಯೇ ಇರುತ್ತದೆ. ಆ ಪಾಸಬುಕ್ ಮೂಲಕವೇ ವ್ಯವಹಾರ ನಡೆಯುತ್ತದೆ. ವಿದ್ಯಾರ್ಥಿಗಳಿಗೆ ಬೇಕಾದಾಗ ಹಣ ತೆಗೆದುಕೊಳ್ಳಬಹುದು, ಹಾಗೂ ಜಮಾ ಮಾಡಬಹುದು.

ಏನಿದು ಸ್ಕೂಲ್ ಬ್ಯಾಂಕ್ ಆಫ್ ಜಿಪಿ, ಏನಿದರ ವಿಶೇಷ

ಸ್ಕೂಲ್ ಬ್ಯಾಂಕ್ ಆಫ್ ಗ್ರಾಮ ಪಂಚಾಯತ್ (SBGP) ಇದು ಹೊಳೆಮಣ್ಣೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಶಾಲಾ ವಿದ್ಯಾರ್ಥಿಗಳಿಗಾಗಿ ಮಾತ್ರ ತೆರೆದ ಬ್ಯಾಂಕ್ ಆಗಿರುತ್ತದೆ. ಪ್ರತಿ ಶನಿವಾರ 9ರಿಂದ 10 ಗಂಟೆಗೆ ಬ್ಯಾಂಕ್ ಶಾಲೆಯಲ್ಲಿ ಕೆಲಸ ನಿರ್ವಹಿಸುತ್ತದೆ. ಪ್ರತಿ ಶಾಲೆಯ ಶಾಲಾ ಸಂಸತ್ತಿನ ಪ್ರಧಾನ ಮಂತ್ರಿ ಮತ್ತು ಹಣಕಾಸು ಮಂತ್ರಿಗಳನ್ನು ಬ್ಯಾಂಕರ್ ಹಾಗೂ ಕ್ಯಾಷಿಯರ್ ಆಗಿ ನಿಯಮಿಸಿ ಬ್ಯಾಂಕ್ ವಹಿವಾಟಿನ ತರಬೇತಿ ನೀಡಿ ವಿದ್ಯಾರ್ಥಿಗಳಿಗೆ SBGP ಬ್ಯಾಂಕಿನ ಜವಾಬ್ದಾರಿ ವಹಿಸಲಾಗಿದೆ.

ಆಸಕ್ತ ಖಾತೆದಾರ ವಿದ್ಯಾರ್ಥಿಗಳು ಕನಿಷ್ಠ ಎರಡು ರೂಪಾಯಿಯಿಂದ ಗರಿಷ್ಠ 20 ರೂಪಾಯಿಯವರೆಗೆ ಉಳಿತಾಯ ಖಾತೆಯಲ್ಲಿ ಜಮೆ ಮಾಡಬಹುದು ಅಥವಾ ಖಾತೆಯಲ್ಲಿ ಜಮೆ ಇರುವ ಮೊತ್ತವನ್ನು ಪಡೆಯಬಹುದು. ಪ್ರತಿ ವಿದ್ಯಾರ್ಥಿಗೆ ಪ್ರತ್ಯೇಕ ಪಾಸ್ ಪುಸ್ತಕ ಒದಗಿಸಲಾಗಿದೆ. ವಾರ್ಷಿಕವಾಗಿ ಅತಿ ಹೆಚ್ಚು ಸಲ ವ್ಯವಹರಿಸಿದ/ಹೆಚ್ಚು ಉಳಿತಾಯ ಮಾಡಿದ ಖಾತೆದಾರರಿಗೆ ಬಹುಮಾನ ನೀಡಿ ಪ್ರೋತ್ಸಾಹಿಸಲಾಗುವುದು.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಸುಜಾತ ಮಠಪತಿ, ಗ್ರಾಮ ಪಂಚಾಯಿತಿ ಸದಸ್ಯರು, ಮುಖ್ಯೋಪಾಧ್ಯಾಯರು, ಅರಿವು ಕೇಂದ್ರದ ಮೇಲ್ವಿಚಾರಕರು, ಗ್ರಾಮೀಣ ಪುನರ್ವಸತಿ ಕಾರ್ಯಕರ್ತರು ಸೇರಿದಂತೆ ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಮಾರಕಾಸ್ತ್ರ ಹಿಡಿದು ಮಧ್ಯರಾತ್ರಿ ವ್ಹೀಲಿಂಗ್ ಪ್ರಕರಣ: ಪುಂಡರ ಹೆಡೆಮುರಿ ಕಟ್ಟಿದ ಖಾಕಿ!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಮಧ್ಯರಾತ್ರಿ ನಡುರಸ್ತೆಯಲ್ಲೇ ಮಾರಕಾಸ್ತ್ರ ಹಿಡಿದು ಪುಂಡಾಟ ಮೆರೆದಿದ್ದ ಯುವಕರನ್ನು ಬಂಧಿಸುವಲ್ಲಿ ಡಿಜೆಹಳ್ಳಿ ಪೊಲೀಸರು ಯಶಸ್ವಿಯಾಗಿದ್ದಾರೆ.

ನಂಜಮತ್, ನಯೀಮ್ ಪಾಷ, ಅರಾಫತ್, ಶಾಹಿಲ್, ಅದ್ನಾನ್ ಬಂಧಿತರು. ಇದೇ ತಿಂಗಳ ಕಳೆದ 13ರಂದು ಮಧ್ಯರಾತ್ರಿ ಶಬ್ಬೇ ಬರಾತ್ ಪ್ರಯುಕ್ತ 25ಕ್ಕೂ ಹೆಚ್ಚು ಮಂದಿ ಕೆಜಿ ಹಳ್ಳಿಯ ನೂರ್ ಮಸೀದಿ ಬಳಿ ಸೇರಿದ್ದರು. ಈ ವೇಳೆ ರೀಲ್ಸ್ ಹುಚ್ಚಿಗಾಗಿ ಅರ್ಫಾತ್, ಸಾಹಿಲ್ ಸೇರಿದಂತೆ ಇನ್ನಿತರರು ಸೇರಿ ವ್ಹೀಲಿಂಗ್ ಪ್ಲ್ಯಾನ್ ಮಾಡಿದ್ದಾರೆ.



ಪ್ಲ್ಯಾನ್ ಮಾಡಿದ ಪುಂಡರ ಗ್ಯಾಂಗ್ ಕೆಜಿ ಹಳ್ಳಿಯ ಮೇನ್‌ರೋಡ್‌ನಲ್ಲಿ ಟ್ರಿಬಲ್ ರೈಡಿಂಗ್‌ನಲ್ಲಿ ಹೋಗಿದ್ದಾರೆ. ಅಲ್ಲಿಂದ ಹೊಸಕೋಟೆ ಟೋಲ್‌ವರೆಗೂ ಹೋಗಿ ಮತ್ತೆ ಅದೇ ರೀತಿ ಕೆಜಿ ಹಳ್ಳಿಗೆ ವಾಪಸ್ ಆಗಿದ್ದಾರೆ. ಏರಿಯಾಗಳಲ್ಲಿ ರ‍್ಯಾಶ್ ಡ್ರೈವ್ ಮಾಡ್ತಿದ್ದ ಟೀಂ, ಆ ಮಧ್ಯರಾತ್ರಿ ಲಾಂಗ್ ಹಿಡಿದು ವ್ಹೀಲಿಂಗ್ ಮಾಡಿತ್ತು.

ಹಬ್ಬದ ಪ್ರಯುಕ್ತ ಪೂರ್ವ ವಿಭಾಗದಲ್ಲಿ ಹೆಚ್ಚು ಪೊಲೀಸರಿಂದ ಬಿಗಿ ಬಂದೋಬಸ್ತ್ ಮಾಡಿಕೊಳ್ಳಲಾಗಿತ್ತು. ಆದರೂ ಕೂಡ ಪುಂಡರ ಗ್ಯಾಂಗ್ ಮಾರಕಾಸ್ತ್ರ ಹಿಡಿದು ರ‍್ಯಾಶ್ ಡ್ರೈವ್ ಮಾಡಿದ್ದಾರೆ. ಈ ಬಗ್ಗೆ ಕೇಂದ್ರ ಸಚಿವ ಕುಮಾರಸ್ವಾಮಿ ಅವರು ತಮ್ಮ ಫೇಸ್‌ಬುಕ್ ಪೇಜ್‌ನಲ್ಲಿ ಪೋಸ್ಟ್ ಮಾಡಿದ್ದರು. ಸಾಮಾಜಿಕ ಜಾಲತಾಣದಲ್ಲಿ ಬೆಂಗಳೂರು ಪೊಲೀಸರ ವಿರುದ್ಧ ಟೀಕೆ ವ್ಯಕ್ತವಾಗಿತ್ತು.

ಸದ್ಯ ಐದು ಆರೋಪಿಗಳನ್ನು ಬಂಧಿಸಲಾಗಿದೆ. ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ್ದ ಪೊಲೀಸ್ ಕಮಿಷನರ್, ಉಳಿದವರಿಗಾಗಿ ಹುಡುಕಾಟ ನಡೆಸುವಂತೆ ಸೂಚನೆ ನೀಡಿದ್ದು, ತನಿಖೆ ಮುಂದುವರೆದಿದೆ.

## ಉರ್ದು ಭಾಷೆ ಭಾರತೀಯ ಸಂಸ್ಕೃತಿಯ ಕೈಗನ್ನಡಿ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮುಸ್ಲಿಂ ಸಮಾಜದ ಮೊದಲ ಶಿಕ್ಷಕಿ ಫಾತಿಮಾ ಶೇಖ್, ಅಬುಲ್ ಕಲಾಂ ಆಜಾದ ಚಾಂದ ಬೀಬಿ ಹಾಗೂ ಮಾಜಿ ರಾಷ್ಟ್ರಪತಿ ಎಪಿಜೆ ಅಬ್ದುಲ್ ಕಲಾಂ ಅವರಂತ ಶ್ರೇಷ್ಠ ವಿದ್ವಾಂಸರನ್ನು ಕೊಟಿದ್ದು ಉರ್ದು ಭಾಷೆ. ಇದು ಭಾರತೀಯ ಭಾಷೆಗಳ ಸಾಂಸ್ಕೃತಿಕ ಕೈಗನ್ನಡಿಯಾಗಿದೆ ಎಂದು ಗದಗ ಗ್ರಾಮೀಣ ವಲಯದ ಕ್ಷೇತ್ರಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ ಅಭಿಪ್ರಾಯಪಟ್ಟರು.

ಸ್ಥಳೀಯ ಅಂಜುಮನ್-ಏ-ಇಸ್ಲಾಂ ಸರಕಾರಿ ಉರ್ದು ಪ್ರಾಥಮಿಕ ಶಾಲೆಯ ವಾರ್ಷಿಕೋತ್ಸವದಲ್ಲಿ ಭಾಗವಹಿಸಿವರು ಮಾತನಾಡಿದರು.

ಅಕ್ಷರ ದಾಸೋಹದ ಅಧಿಕಾರಿ ಶಂಕರ ಹಡಗಲಿ, ಅಂಜುಮನ್ ಸಂಸ್ಥೆ ಅಧ್ಯಕ್ಷರಾದ ತಾಜುದ್ದೀನ ಕಿಂಡ್ರೀ, ಹೈದರ ಖವಾಸ, ದಾವೂದ ಜಮಾಲ್, ಮುನ್ನಾ ಢಾಲಾಯತ, ಖಲಂದರ ಗಾಡಿ, ಎಸ್‌ಡಿಎಂಸಿ ಅಧ್ಯಕ್ಷ ಎಲ್.ಎನ್. ಮಕಾನದಾರ, ಮುನ್ನಾ ದುರ್ಗಿಗುಡಿ, ಖಾದರ ಲಾಡಸಾಬನವರ ಸೇರಿದಂತೆ ಸದಸ್ಯರು, ಶಾಲಾ ಶಿಕ್ಷಕಿಯರು, ಸಿಬ್ಬಂದಿವರ್ಗದವರು ಹಾಜರಿದ್ದರು.

# ಸಾಮೂಹಿಕ ಆರೋಗ್ಯ ವಿಮೆ ಕಲ್ಪಿಸಲು ಒತ್ತಾಯ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹಾಗೂ ಇಎಸ್‌ಐ-ಪಿಎ ಪಡೆಯದ ನರೇಗಾ ಸಿಬ್ಬಂದಿಗೆ ಸಾಮೂಹಿಕ ಆರೋಗ್ಯ ವಿಮೆ ಸೌಲಭ್ಯವನ್ನು ಕಲ್ಪಿಸಬೇಕು ಎಂದು ಒತ್ತಾಯಿಸಿ ರಾಜ್ಯ ಬೇರ್ ಫ್ಯೂಟ್ ಟೆಕ್ನಿಷಿಯನ್ಸ್ ಕ್ಷೇಮಾಭಿವೃದ್ಧಿ ಸಂಘದ ಗದಗ ಜಿಲ್ಲಾ ಘಟಕದಿಂದ ಜಿ.ಪಂ ಸಿಇಓ ಅವರಿಗೆ ಮನವಿ ಸಲ್ಲಿಸಲಾಯಿತು.



ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಸುಮಾರು 8 ವರ್ಷಗಳಿಂದ ಬೇರ್ ಫೂಟ್ ಟೆಕ್ನಿಷಿಯನ್ಸ್ ಕಾರ್ಯನಿರ್ವಹಿಸುತ್ತಿದ್ದೇವೆ. ಮೊದಲು 5-8 ಪಂಚಾಯಿತಿಗಳಲ್ಲಿ ಹಾಗೂ ಪ್ರಸ್ತುತ 3-4 ಪಂಚಾಯಿತಿಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದು, ನಾವು ಪ್ರತಿನಿತ್ಯ 50-100 ಕಿ.ಮೀ ದ್ವಿಚಕ್ರ ವಾಹನಗಳಲ್ಲಿ ಸಂಚಾರ ಮಾಡುತ್ತೇವೆ. ಈಗಾಗಲೇ ಅನೇಕ ಅಪಘಾತಗಳು ಸಂಭವಿಸಿದ್ದು, ಬಿಎಫ್‌ಟಿ ಸಿಬ್ಬಂದಿಗೆ ಸಾಮೂಹಿಕ ಆರೋಗ್ಯ ವಿಮೆ ಸೌಲಭ್ಯವನ್ನು ಕಲ್ಪಿಸಬೇಕು. ಪ್ರಸ್ತುತ ಸಂದರ್ಭದಲ್ಲಿ ಬದಲಾಗುತ್ತಿರುವ ವಾತಾರಣದಲಿ ನಿತ್ಯವೂ ಒಂದಿಲ್ಲೊಂದು ಆರೋಗ್ಯ ಸಮಸ್ಯೆಗಳು ಕಾಡುತ್ತಿದೆ. ಈ ನಿಟ್ಟಿನಲ್ಲಿ ಬಿಎಫ್ಟಿಸಿಬ್ಬಂದಿಗೆ ಆರೋಗ್ಯ ವಿಮೆ ಅಗತ್ಯವಾಗಿದೆ ಎಂದು ಮನವಿಯಲ್ಲಿ ತಿಳಿಸಿದರು.

ಈ ವೇಳೆ ಗದಗ ಜಿಲ್ಲೆಯ ಬಿ.ಎಫ್.ಟಿ. ಕ್ಷೇಮಾಭಿವೃದ್ಧಿ ಸಂಘದ ಕಿರಣ್ ಕುಮಾರ್ ಮೇಗೂರ, ಅಶೋಕ ಕಂಬಳಿ, ಮಲ್ಲಪ್ಪ ಮುಗಳಿ, ಪ್ರಕಾಶ ಅಂಬಕ್ಕಿ, ಶಂಭಯ್ಯ ಡಂಬಳಮಠ, ಸತೀಶ ಅರಿಶಿಣದ, ಪುಷ್ಪಾ ಬಡಿಗೇರ, ರವಿ ಹೊಂಬಳ, ಚನ್ನಬಸಗೌಡ ಮಲಗೌಡ್ರ ಇತರರಿದ್ದರು.

## ಜಾಕೀರ ಹುಸೇನರಿಗೆ 'ಪ್ರಗತಿ ಚಿತ್ರ' ಪ್ರಶಸ್ತಿ



■ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚೆಗೆ ಆಂಧ್ರ ಪ್ರದೇಶ ಸ್ಟೇಟ್ ಕ್ರಿಯೇಟಿವಿಟಿ ಆ್ಯಂಡ್ ಕಲ್ಚರ್ ಕಮಿಷನ್ ಆ್ಯಂಡ್ ಕ್ರಿಯೇಟಿವಿಟಿ ಫೈನ್ ಆರ್ಟ್ ಅಕಾಡೆಮಿ ಗುಂಟೂರು ಇವರ ಸಂಯುಕ್ತ ಆಶ್ರಯದಲ್ಲಿ 19ನೇ ವರ್ಷದ ಇಂಡಿಯನ್ ಆರ್ಟ್ ಫೆಸ್ಟಿವಲ್ ನ್ಯಾಷನಲ್ ಆರ್ಟ್ ಕಾಂಪಿಟೇಶನ್ ಆ್ಯಂಡ್ ಎಕ್ಸಿಬಿಷನ್ ಗುಂಟೂರಿನ ವೆಂಕಟೇಶ್ವರ ವಿಜ್ಞಾನ ಮಂದಿರದಲ್ಲಿ ಜರುಗಿತು.

ಈ ಕಾರ್ಯಾಗಾರಕ್ಕೆ ಗದಗ ಜಿಲ್ಲೆಯ ಯುವ ಚಿತ್ರ ಕಲಾವಿದ ಡಾ. ಜಾಕೀರಹುಸೇನ ಎಂ. ಕೊರ್ಲಹಳ್ಳಿ ಚಾಪ್‌ಕೋಲ್ ಮಾಧ್ಯಮದಿಂದ ರಚಿಸಿರುವ ಕ್ರಿಯೇಟಿವಿಟಿ ಮತ್ತು ಅಪ್ಸಟ್ರಾಕ್ಟ್ ವಿಷಯ ಪೂರಕ ಚಿತ್ರಕ್ಕೆ 'ಪ್ರಗತಿ ಚಿತ್ರ' ಪ್ರಶಸ್ತಿ ಪಡೆದುಕೊಂಡಿದ್ದಾರೆ . ಸಮಾರಂಭದಲ್ಲಿ ಆಂಧ್ರಪ್ರದೇಶ ಸ್ಟೇಟ್ ಕ್ರಿಯೇಟಿವಿಟಿ ಆ್ಯಂಡ್ ಕಲ್ಚರ್ ಕಮಿಷನರಾದ ರೇಗುಲಾ ಮಲ್ಲಿಕಾರ್ಜುನ ರಾವ್, ಫೌಂಡರ್ ಆಫ್ ಪ್ರೆಸಿಡೆಂಟ್ ಡಾ. ಕೆ.ಪಿ. ಬಾಬು, ಡೈರೆಕ್ಟರ್ ಕೆ. ಸುನಿತಾ, ಮಹಮ್ಮದ್ ನಾಸೀರ್ ಅಹಮದ್ ಘಾರು (ಎಂ.ಎಲ್.ಎ) ಗುಂಟೂರು ಹಾಗೂ ಡಾ. ಜಿ.ವೈ. ಗಿರಿ, ಶ್ರೀನಿವಾಸ್ ತನಿರವೈಗಾರು, ಡಾ. ಚಂದ್ರಶೇಖರ್‌ಗಾರು, ತೇಜಸ್ವಿನಿ ಪೂಡಾಪತಿ ಪ್ರಶಸ್ತಿ ಪ್ರದಾನ ಮಾಡಿದರು. ಸಾಧಕ ಕಲಾವಿದ ಜಾಕೀರಹುಸೇನರಿಗೆ ನಗರದ ಎಂ.ಕೆ.ಕೆ. ಫೌಂಡೇಷನ್ ಸಂಸ್ಥೆ ಹಾಗೂ ಜಿಲ್ಲೆಯ ಕಲಾವಿದರ ಕಲಾ ಬಳಗದವರು ಅಭಿನಂದಿಸಿದ್ದಾರೆ.

## ಜನ್ಮದಿನದ ಪ್ರಯುಕ್ತ ಉಚಿತ ಆರೋಗ್ಯ ತಪಾಸಣೆ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಗುರುವಾರ ತಾಲೂಕಿನ ಬೆಳ್ಳಟ್ಟಿ ಗ್ರಾಮದ ಎಪಿಎಂಸಿ ಸಭಾಭವನದಲ್ಲಿ ಬೆಳ್ಳಟ್ಟಿ ಗ್ರಾ.ಪಂ ಮಾಜಿ ಅಧ್ಯಕ್ಷ, ಹಾಲಿ ಸದಸ್ಯ ತಿಮ್ಮರಡ್ಡಿ ಮರಡ್ಡಿ ಹುಟ್ಟುಹಬ್ಬದ ನಿಮಿತ್ತ ಅವರ ಸ್ನೇಹ ಬಳಗ, ಸುಚಿರಾಯಿ ಆಸ್ಪತ್ರೆ ಹುಬ್ಬಳ್ಳಿ ಮತ್ತು ಡಾ. ಮಹೇಶ ನಾಲವಾಡ ಪ್ರತಿಷ್ಠಾನ ಹುಬ್ಬಳ್ಳಿ ಇವರ ನೇತೃತ್ವದಲ್ಲಿ ಉಚಿತ ಆರೋಗ್ಯ ತಪಾಸಣೆ ಜರುಗಿತು. ಈ ಸಂದರ್ಭದಲ್ಲಿ ತಿಮ್ಮರಡ್ಡಿ ಮರಡ್ಡಿ ಮಾತನಾಡಿ, ಗ್ರಾಮವೂ ಸೇರಿದಂತೆ ಸುತ್ತಮುತ್ತಲಿನ ಜನತೆಯ ಆರೋಗ್ಯದ ದೃಷ್ಟಿಯಿಂದ ಹುಟ್ಟುಹಬ್ಬದ ನಿಮಿತ್ತ ಉಚಿತವಾಗಿ ಆರೋಗ್ಯ ತಪಾಸಣಾ ಶಿಬಿರವನ್ನು ಬಳಗದ ವತಿಯಿಂದ ಆಯೋಜಿಸಲಾಗಿದ್ದು, ಸುಮಾರು 500ಕ್ಕೂ ಹೆಚ್ಚು ಜನರು ಇದರ ಲಾಭವನ್ನು ಪಡೆದುಕೊಂಡಿದ್ದಾರೆ. ಫಿಜಿಶಿಯನ್, ಹೃದಯರೋಗ, ಸ್ತ್ರೀರೋಗ ತಜ್ಞರು, ಚಿಕ್ಕಮಕ್ಕಳ ತಜ್ಞರು, ಎಲುಬು-ಕೀಲುಗಳ ತಜ್ಞರು, ಚರ್ಮರೋಗ ತಜ್ಞರನ್ನು ಕರೆಯಿಸಿ ಜನತೆಯ ಆರೋಗ್ಯವನ್ನು ತಪಾಸಿಸಲಾಗಿದೆ. ಕಳೆದ ಕೆಲವು ವರ್ಷಗಳಿಂದ ಬಳಗದ ವತಿಯಿಂದ ಉಚಿತ ನೇತ್ರದಾನ ಶಿಬಿರ, ರಕ್ತದಾನ ಶಿಬಿರ ಮತ್ತು ಆರೋಗ್ಯ ಶಿಬಿರಗಳನ್ನು ಆಯೋಜಿಸಲಾಗುತ್ತಿದೆ. ಮುಂದೆಯೂ ಕೂಡ ಇಂತಹ ಸಮಾಜಮುಖಿ ಕೆಲಸಗಳು ಮುಂದುವರೆಯಲಿವೆ ಎಂದರು. ಕಾರ್ಯಕ್ರಮದ ಸಾನ್ನಿಧ್ಯವನ್ನು ಬೆಳ್ಳಟ್ಟಿಯ ರಾಮಲಿಂಗೇಶ್ವರ ದಾಸೋಹಮಠದ ಬಸವರಾಜ ಸ್ವಾಮೀಜಿ ವಹಿಸಿದ್ದರು. ಜಿ.ಪಂ ಮಾಜಿ ಸದಸ್ಯ ಶಿವಪ್ರಕಾಶ ಮಹಾಜನಶೆಟ್ಟರ, ಸುನೀಲ ಮಹಾಂತಶೆಟ್ಟರ, ಬಿ.ಡಿ. ಪಲ್ಲೇದ, ಕುಮಾರಸ್ವಾಮಿ ಹಿರೇಮಠ, ಮದನಲಾಲ್ ಬಾಫಣಾ, ಶಂಕರ ಮರಾಠೆ, ಮೋಹನ ಗುತ್ತೆಮ್ಮನವರ, ಮಹೇಶ ಬಡ್ನಿ, ಕೊಟ್ರೇಶ ಸಜ್ಜನರ, ಮಲ್ಲಯ್ಯ ಶೀಲವಂತಮಠ, ದಿಲ್‌ಶಾದಬಿ ಚೌರಿ, ಶ್ರಾವಣಿ ಮಾಂಡ್ರೆ, ಸುರೇಶ ಬೆಲಹುಣಸಿ, ಕರಿಯಪ್ಪ ಮಹದೇವಪ್ಪನವರ, ಅಶೋಕ ಕಂಪ್ಲಿ, ಉದಯಕುಮಾರ ತೋಟರ, ಗಿರೀಶರಡ್ಡಿ ಮೇಕಳಿ, ರಬಬಾನಿ ಚೌರಿ, ಬಸವರಡ್ಡಿ ಗೋವಣ್ಣನವರ, ಪರಶುರಾಮ ಗೋಪಾಳಿ, ಮಲ್ಲಿಕಾರ್ಜುನ ಶ್ಯಾಗೋಟಿ, ರಾಜೀವ್ ಮಾಂಡ್ರೆ, ಶ್ರೀನಿವಾಸಗೌಡ ಪಾಟೀಲ, ರಾಘವೇಂದ್ರ ಬಡಿಗೇರ, ಜಗದೀಶ ಸಾಸಲವಾಡ, ಆನಂದ ಸತ್ಯಮ್ಮನವರ, ಗೌತಮ ಹಳ್ಳೆಮ್ಮನವರ, ರಾಘು ಗುತ್ತೆಮ್ಮನವರ, ಫಕ್ಕೀರಡ್ಡಿ ಸಿಡಗನಾಳ, ಫಕ್ಕೀರಡ್ಡಿ ಬಸವರಡ್ಡಿ, ಕೃಷ್ಣಾ ದುರಗದ, ಶ್ರೀನಿವಾಸ ಬಸವರಡ್ಡಿ, ವಿನಾಯಕ ಅಳವಂಡಿ ಮುಂತಾದವರು ಉಪಸ್ಥಿತರಿದ್ದರು.

## ದಿ. ಶೋಭಾ ಹುಯಿಲಗೋಳರಿಗೆ ಶ್ರದ್ಧಾಂಜಲಿ

■ವಿಜಯಸಾಕ್ಷಿ ಸುದ್ದಿ, ಗದಗ



ತಾಲೂಕಿನ ಹುಯಿಲಗೋಳ ಗ್ರಾಮದ ನಿವಾಸಿ, ಆಕಾಶವಾಣಿಯ ೦ ಗ್ರೇಡ್ ಕಲಾವಿದರು, ಪ್ರಸಿದ್ಧ ಸಂಗೀತಗಾರರು ಮತ್ತು ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಶೋಭಾ ರಾಘವೇಂದ್ರರಾವ್ ಹುಯಿಲಗೋಳ ಇವರು ತಮ್ಮ 78ನೇ ವಯಸ್ಸಿನಲ್ಲಿ ಗುರುವಾರ ಮುಂಜಾನೆ ನಿಧನರಾದರು. ಇವರ ನಿಧನದ ಹಿನ್ನೆಲೆಯಲ್ಲಿ ವಿದ್ಯಾದಾನ ಸಮಿತಿಯ ಅಧ್ಯಕ್ಷರು, ಗೌರವ ಕಾರ್ಯದರ್ಶಿಗಳು, ಆಡಳಿತ ಮಂಡಳಿಯ ಸರ್ವ ಸದಸ್ಯರು, ವಿದ್ಯಾದಾನ ಸಮಿತಿ ಕನ್ನಡ ಪ್ರಾಥಮಿಕ ಶಾಲೆಯ ಮುಖ್ಯಸ್ಥರು, ಸಮಸ್ತ ಶಿಕ್ಷಕ/ಶಿಕ್ಷಕಿಯರು ಹಾಗೂ ವಿದ್ಯಾರ್ಥಿಗಳು ಅವರ ದಿವ್ಯಾತ್ಮಕ್ಕೆ ಚಿರಶಾಂತಿ ನೀಡಲಿ ಹಾಗೂ ಅವರ ಕುಟುಂಬ ವರ್ಗದವರಿಗೆ ದುಃಖ ಸಹಿಸಿಕೊಳ್ಳುವ ಶಕ್ತಿಯನ್ನು ಪರಮಾತ್ಮ ಕರುಣಿಸಲೆಂದು ಪ್ರಾರ್ಥಿಸಿ, ಶ್ರದ್ಧಾಂಜಲಿ ಸಲ್ಲಿಸಿದ್ದಾರೆ.

### ಕಸಾಪ ದತ್ತಿ ಉಪನ್ಯಾಸ ಕಾರ್ಯಕ್ರಮದಲ್ಲಿ 'ಬಸವ ವಿಚಾರಗಳ ಚಿಂತನ-ಮಂಥನ'

# ಸಮಾನತೆಯಿಂದ ಯಾರೂ ಶಿವಶರಣರಾಗಬಹುದು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಮಾನತೆ, ಕಾಯಕ ತತ್ವಗಳನ್ನು ಆಚರಿಸುವ ಮತ್ತು ಪಾಲಿಸುವ ಯಾರು ಬೇಕಾದರೂ ಶಿವಶರಣರಾಗಬಹುದು ಎನ್ನುವದು ಬಸವಣ್ಣನವರ ದೃಷ್ಟಿಕೋನವಾಗಿತ್ತು. ಕಾಯಕವೇ ಕೈಲಾಸ ಎಂಬುದು ಅವರು ಜಗತ್ತಿಗೆ ನೀಡಿದ ನಿತ್ಯ ಸತ್ಯ ಮಂತ್ರವಾಗಿದೆ ಎಂದು ಲಕ್ಷ್ಮೇಶ್ವರದ ಸರಕಾರಿ ಮಾದರಿ ಪ್ರಾಥಮಿಕ ಶಾಲೆ ನಂ.4ರ ಮುಖ್ಯೋಪಾಧ್ಯಾಯ ಎಚ್.ಬಿ. ಸಣ್ಣಮನಿ ಅಭಿಪ್ರಾಯಪಟ್ಟರು.



ಅವರು ಲಕ್ಷ್ಮೇಶ್ವರ ತಾಲೂಕಾ ಕನ್ನಡ ಸಾಹಿತ್ಯ ಪರಿಷತ್ತು ಎಸ್.ಜಿ. ಅಂಗಡಿ ಶಿಕ್ಷಕರ ಮನೆಯಲ್ಲಿ ಏರ್ಪಡಿಸಿದ್ದ ದಿ.ಫಕೀರಪ್ಪ ಸೋಮಕ್ಕನವರ ಅವರು ನೀಡಿದ ದತ್ತಿ ಉಪನ್ಯಾಸ ಕಾರ್ಯಕ್ರಮದಲ್ಲಿ 'ಬಸವ ವಿಚಾರಗಳ ಚಿಂತನ-ಮಂಥನ' ವಿಷಯದ ಕುರಿತು ಮಾತನಾಡಿದರು.

ಪುರಸಭೆ ಮಾಜಿ ಸದಸ್ಯ, ಅಭಿಯಂತರ ಮಹೇಶ ಸೋಮಕ್ಕನವರ ಮಾತನಾಡಿ, ಕನ್ನಡ ಸಾಹಿತ್ಯ ಪರಿಷತ್ತು ದತ್ತಿ ಕಾರ್ಯಕ್ರಮಗಳ ಮೂಲಕ ದತ್ತಿದಾನಿಗಳ ಸ್ಮರಣೆಯೊಂದಿಗೆ ಸಮಾಜಮುಖಿ ಕಾರ್ಯಕ್ರಮಗಳನ್ನು ಸಂಘಟಿಸುತ್ತಿರುವುದು ಅಭಿನಂದನೀಯ ಎಂದರು.

ಕಸಾಪ ತಾಲೂಕು ಘಟಕದ ಅಧ್ಯಕ್ಷ ಈಶ್ವರ ಮೆಡ್ಲೇರಿ ಕನ್ನಡ ಸಾಹಿತ್ಯ ಪರಿಷತ್ತು ತಾಲೂಕ ಘಟಕದ ಕಾರ್ಯ ಚಟುವಟಿಕೆಗಳನ್ನು ವಿವರಿಸಿದರು. ಗಿರೀಶ ನೇಕಾರ ಸಾಹಿತ್ಯ ಪರಿಷತ್ತಿನ ಕಾರ್ಯ ಚಟುವಟಿಕೆಗಳನ್ನು ಶ್ಲಾಘಿಸಿದರು. ಸಮಾಜ ಸೇವಾ ರತ್ನ ಪುರಸ್ಕೃತ ಕರಿಯಪ್ಪ ಶಿರಹಟ್ಟಿ, ಗ್ರಾಮೀಣ ಶಿಕ್ಷಕ ರತ್ನ ರಾಜ್ಯ ಪ್ರಶಸ್ತಿ ಪುರಸ್ಕೃತ ಶಿಕ್ಷಕರಾದ ಶಿವಾನಂದ ಅಸುಂಡಿ, ಶ್ರೀಕಾಂತ ನಂದೆಣ್ಣವರ, ಪೀರಸಾಬ ನದಾಫ್, ಉಪಾಸಿ, ಸಂಗಮೇಶ ಅಂಗಡಿಯವರನ್ನು ಸನ್ಮಾನಿಸಲಾಯಿತು. ಶ್ರೀನಿಧಿ ಶಂಕರ ಶಿಳ್ಳಿನ, ಅಮೃತಾ ಕಾಯಿಶೆಟ್ಟಿ, ವಿ.ಎಂ. ಹೂಗಾರ ವಚನ ಗಾಯನ ನಡೆಸಿಕೊಟ್ಟರು.

ಈ ವೇಳೆ ಆರ್.ಎನ್. ಪಂಚಬಾವಿ, ಎಸ್.ಬಿ. ಅಣ್ಣಿಗೇರಿ, ಪಿ.ಎಚ್. ಕೊಂಡಾಬಿಂಗಿ, ಶಂಕರ ಶಿಳ್ಳಿನ, ಪಟ್ಟಣಶೆಟ್ಟಿ, ಮಹೇಶ ಹಿರೇಮಠ, ಶಂಕರ ಮೇಟಿಗೌಡ್ರ, ಬಿ.ಎನ್. ಗಾಯಕವಾಡ, ಎಮ್.ಎಚ್. ದಿಂಡವಾಡ, ವಿ.ಜಿ. ಜೋಗೊಜಿ, ಪ್ರವೀಣ ಅಂಕಲಿ, ನಿಂಗರಾಜ ಮಲ್ಲಣ್ಣವರ, ರವಿ ಮೇಗಿಲಮನಿ, ಪ್ರಭು ಹಾಲಗುಂಡಿ, ಶಿವಾನಂದ ಸಂಶಿ, ಪುಟ್ಟಪ್ಪ ಕಾಯಿಶೆಟ್ಟಿ, ಅಶೋಕ ಬಿಸೆರೊಟ್ಟಿ, ವಸಂತ ನಡುವಲಕೇರಿ, ಮಂಜುನಾಥ ಕುರುಹಿನಶೆಟ್ಟಿ, ಕೆ.ಬಿ. ಗೊಜನೂರ, ಪ್ರೇಮಾ ಅಂಗಡಿ, ರೇಖಾ ವಡಕಣ್ಣವರ, ಆರ್.ಬಿ. ಬಂಡಿವಡ್ಡರ, ಸೌಮ್ಯ ಕೊಪ್ಪದ ಇದ್ದರು. ಮಂಜುನಾಥ ಚಾಕಲಬ್ಬಿ ನಾಗರಾಜ ಮಜ್ಜಿಗುಡ್ಡ, ಎನ್.ಎಸ್. ಪವಾಡ ಶೆಟ್ರ ನಿರೂಪಿಸಿದರು.

ತಾಲೂಕಾ ಪ್ರೌಢಶಾಲಾ ಶಿಕ್ಷಕರ ಸಂಘದ ಸಂಘಟನಾ ಕಾರ್ಯದರ್ಶಿ ಸಂಗಮೇಶ ಅಂಗಡಿ ಮಾತನಾಡಿ, ಸಾಹಿತ್ತಿಕ ಕಾರ್ಯಕ್ರಮಗಳ ಮೂಲಕ ಸಂಸ್ಕೃತಿಯನ್ನು ಉಳಿಸಿ-ಬೆಳೆಸುವ ಶ್ರೇಷ್ಠ ಕಾರ್ಯ ಇಂದಿನ ಅತ್ಯಗತ್ಯತೆಯಾಗಿದೆ. ನಮ್ಮ ಸಂಸ್ಕೃತಿ ನಮ್ಮ ಬೇರು. ಬೇರು ಸದೃಢವಾಗಿದ್ದರೆ ಮೊಗ್ಗರಳಿ ಹೂವಾಗಿ ಪರಿಮಳ ಬೀರಲು ಸಾಧ್ಯ ಎಂದರು.

## ಆಕ್ಷೇಪಣೆಗೆ ಫೆ. 24 ಕೊನೆಯ ದಿನ

**■ವಿಜಯಸಾಕ್ಷಿ ಸುದ್ದಿ, ಗದಗ**

ಸಂಜೀವಿನಿ-ಕೆಎಸ್‌ಆರ್‌ಎಲ್‌ಪಿಎಸ್ ಸಂಸ್ಥೆಯ ಓಖಐಃ ಯೋಜನೆಯಡಿ ಗದಗ ಜಿಲ್ಲೆ ಹಾಗೂ ತಾಲೂಕ ಅಭಿಯಾನ ನಿರ್ವಹಣಾ ಘಟಕಗಳಲ್ಲಿ ಖಾಲಿ ಇರುವ ಒಟ್ಟು 13 ಹುದ್ದೆಗಳನ್ನು ಹೊರ ಗುತ್ತಿಗೆ ಆಧಾರದಲ್ಲಿ BKR Service Private Limited Bangalore ಸಂಸ್ಥೆಯ ಮೂಲಕ ನೇಮಕ ಮಾಡಿಕೊಳ್ಳಲು ಸಂಜೀವಿನಿ ಕೆಎಸ್‌ಆರ್‌ಎಲ್‌ಪಿಎಸ್‌ನ ನಿಯಮಾನುಸಾರ https://jobskscrlps.karnataka.gov.in/index-new-aspx ಮೂಲಕ ಅರ್ಜಿಯನ್ನು ಆಹ್ವಾನಿಸಲಾಗಿದೆ. ಸದರಿ ಹುದ್ದೆಗಳಿಗೆ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳ ಪಟ್ಟಿಯನ್ನು ಷರಾದೊಂದಿಗೆ https://gadag.nic.in ನಲ್ಲಿ ಪ್ರಕಟಿಸಲಾಗಿದ್ದು, ಸದರಿ ಪಟ್ಟಿಗೆ ಸಂಬಂಧಿಸಿದಂತೆ, ಯಾವುದೇ ಆಕ್ಷೇಪಣೆಗಳಿದ್ದಲ್ಲಿ BKR Service Private Limited Bangalore ಇವರಿಗೆ ದಿ. 24-2-2025 ರೊಳಗಾಗಿ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾ ಪಂಚಾಯತ್ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.



ಗದಗ ಜಿಲ್ಲಾ ಎನ್.ಎಸ್.ಯು.ಆಯ್ ಅಧ್ಯಕ್ಷರಾಗಿ 2ನೇ ಅವಧಿಗೆ ಕಾರ್ಯನಿರ್ವಹಿಸಿರುವ ಅಹಮ್ಮದ ಹುಸೇನ ಖಾಜಿ ಅವರು ಗದಗ ಜಿಲ್ಲಾ ಕಾಂಗ್ರೆಸ್ ಯುವ ಸಮಿತಿಯ ಉಪಾಧ್ಯಕ್ಷರಾಗಿ ಆಯ್ಕೆ ಆಗಿರುವ ಹಿನ್ನೆಲೆಯಲ್ಲಿ ರಾಜ್ಯ ಕಾಂಗ್ರೆಸ್ ಯುವ ಸಮಿತಿಯ ಮಾಜಿ ರಾಜ್ಯಾಧ್ಯಕ್ಷರಾದ ರಕ್ಷಾ ರಾಮಯ್ಯ ಅವರು ಬೆಂಗಳೂರಿನಲ್ಲಿ ಸನ್ಮಾನಿಸಿ, ಗೌರವಿಸಿ, ಅಭಿನಂಧಿಸಿದರು.

### ಮುಂಗಾರು ಹಂಗಾಮಿನ ಬೆಳೆ ಸಮೀಕ್ಷೆಯಲ್ಲಿ 67 ರೈತ ಫಲಾನುಭವಿಗಳ ದಾಖಲೆಯಲ್ಲಿ ವ್ಯತ್ಯಾಸ

# ಕೋಡಂಗಿ ಯಾರು, ವೀರಭದ್ರ ಯಾರು?!

**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಶಿರಹಟ್ಟಿ ಮತ್ತು ಲಕ್ಷ್ಮೇಶ್ವರ ತಾಲೂಕುಗಳಲ್ಲಿ 2023-24ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಮಾಡಲಾದ ಬೆಳೆ ವಿಮೆ ಮತ್ತು ಬೆಳೆ ಸಮೀಕ್ಷೆಯಲ್ಲಿ ಕೆಲ ವ್ಯತ್ಯಾಸ ಕಂಡು ಬಂದಿರುವದರಿಂದ ಶಿರಹಟ್ಟಿ ತಾಲೂಕಿನ 27 ಹಾಗೂ ಲಕ್ಷ್ಮೇಶ್ವರ ತಾಲೂಕಿನ 40 ರೈತ ಫಲಾನುಭವಿಗಳು ಸಮೀಕ್ಷೆಗೆ ಹೊಂದಾಣಿಕೆಯಾಗುತ್ತಿಲ್ಲ. ಇವರೆಲ್ಲರಿಗೂ ಕೃಷಿ ಇಲಾಖೆ ಆಕ್ಷೇಪಣೆ ಸಲ್ಲಿಸಲು ಮಾ.3ರವರೆಗೆ ಕಾಲವಕಾಶ ನೀಡಿದೆ.

ಗ್ರಾಮ ಮಟ್ಟದಲ್ಲಿ ಪಿಆರ್‌ಓ, ಗ್ರಾಮ ಆಡಳಿತಾಧಿಕಾರಿ, ಕೃಷಿ ಮತ್ತು ತೋಟಗಾರಿ-ಕೆ ಇಲಾಖೆ ಸಹಾಯಕರೆಲ್ಲರೂ ಸೇರಿ ಬೆಳೆ ಸಮೀಕ್ಷೆಯನ್ನು ನಡೆಸಿದ್ದು, ಇವರು ನಡೆಸಿದ ಸಮೀಕ್ಷೆಗೂ ರೈತರು ಬೆಳೆ ವಿಮಾ ತುಂಬಿದ್ದಕ್ಕೂ ವ್ಯತ್ಯಾಸವಾಗಿರುವದರಿಂದ ಎರಡೂ ತಾಲೂಕುಗಳಲ್ಲಿ 67 ರೈತ ಫಲಾನುಭವಿಗಳಿಗೆ ತಾವು 2023-24ರ ಮುಂಗಾರು ಹಂಗಾಮಿನಲ್ಲಿ ನಮೂದಾದ ಬೆಳೆಯ ಉತಾರ, ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಬೆಳೆ ಮಾರಾಟ ಮಾಡಿದ್ದಕ್ಕೆ ಅದರ ರಸೀದಿ, ಅಥವಾ ಎಪಿಎಂಸಿಯಲ್ಲಿ ಬೆಳೆ ಮಾರಾಟ ಮಾಡಿದ್ದರ ರಸೀದಿಗಳೊಂದಿಗೆ ಮಾ.3ರ ಒಳಗೆ ರೈತ ಸಂಪರ್ಕ ಕೇಂದ್ರ ಶಿರಹಟ್ಟಿ ಮತ್ತು ಲಕ್ಷ್ಮೇಶ್ವರದಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ.

> ಪ್ರೈವೇಟ್ ಪರ್ಸನ್ ಸಮರ್ಪಕವಾಗಿ ಜಿಪಿಎಸ್ ಮಾಡಬೇಕು. ರೈತರಿಗೆ ಹೆಚ್ಚಿನ ತಿಳುವಳಿಕೆ ನೀಡಬೇಕು. ಸರಕಾರ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಿ ಸರಕಾರದ ಸೌಲಭ್ಯ ಎಲ್ಲ ರೈತರಿಗೂ ಸಹ ದೊರೆಯುವಂತೆ ವ್ಯವಸ್ಥೆಯನ್ನು ಮಾಡಬೇಕು.
>
> **- ರಮೇಶ ಕೋಳಿವಾಡ.**
> **ಜಿಲ್ಲಾ ಪ್ರ.ಕಾರ್ಯದರ್ಶಿ, ಭಾರತೀಯ ಕಿಸಾನ ಸಂಘ.**



ಗ್ರಾಮ ಮಟ್ಟದಿಂದ ತಾಲೂಕು ಮಟ್ಟದವರೆಗೂ ಬೆಳೆ ಸಮೀಕ್ಷೆಯನ್ನು ಸಮರ್ಪಕವಾಗಿ ನಿರ್ವಹಿಸಿದ್ದಾಗಿ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಹೇಳುತ್ತಿದ್ದಾರೆ. ಹೀಗಿದ್ದಾಗ್ಯೂ ಸಹ ಸಮೀಕ್ಷೆಗೂ ಬೆಳೆ ವಿಮೆಯಲ್ಲಿ ನಮೂದಾದ ಬೆಳೆಗಳಿಗೂ ಹೊಂದಾಣಿಕೆ ಆಗದೇ ಇರುವುದು ಹಲವು ಸಂಶಯಗಳಿಗೆ ಎಡೆ ಮಾಡಿಕೊಡುತ್ತಿದೆ.

ಬೆಳೆ ಸಮೀಕ್ಷೆಗೂ ವಿಮೆ ತುಂಬಿದ ಬೆಳೆಗಳಿಗೂ ವ್ಯತ್ಯಾಸ ಬರುತ್ತಿರುವದರಿಂದ ಇದರಲ್ಲಿ ಮಧ್ಯವರ್ತಿಗಳ ಹಾವಳಿ ಇರಬಹುದೆಂಬ ಶಂಕೆಯನ್ನು ಕೆಲ ಪ್ರಜ್ಞಾವಂತ ರೈತರು ವ್ಯಕ್ತಪಡಿಸುತ್ತಿದ್ದು, ರೈತ-ರಿಂದ ಪಹಣಿಗಳನ್ನು ಪಡೆದು ತಾವೇ ವಿಮೆ ಕಂತನ್ನು ತುಂಬಿ ಇನ್ಸುರೆನ್ಸ್ ಕ್ಲೇಮ್ ಆದ ನಂತರ ರೈತರಿಂದ ಅದಕ್ಕೆ ಪ್ರತಿಯಾಗಿ ಹಣವನ್ನು ಪಡೆಯುತ್ತಿದ್ದಾರೆಂಬ ಆರೋಪಗಳು ಸಹ ಕೇಳಿಬಂದಿವೆ. ಕಾರಣಗಳು ಏನೇ ಇದ್ದರೂ, ಅರ್ಹ ರೈತ ಫಲಾನುಭವಿಗಳು ಸರಕಾರದ ಸೌಲಭ್ಯಗಳಿಂದ ವಂಚಿತರಾಗಬಾರದೆನ್ನುವುದು ಪ್ರಜ್ಞಾವಂತರ ಅಭಿಪ್ರಾಯವಾಗಿದೆ.

> ಸರಕಾರ ರೈತರನ್ನು ಆರ್ಥಿಕ ಸಂಕಷ್ಟದಿಂದ ಪಾರು ಮಾಡುವುದಕ್ಕೆ ಬೆಳೆ ವಿಮೆಯನ್ನು ಜಾರಿಗೊಳಿಸಿದೆ. ಕೆಲ ಮಧ್ಯವರ್ತಿಗಳ ಹಾವಳಿಯಿಂದ ಅರ್ಹ ರೈತರು ಸೌಲಭ್ಯದಿಂದ ವಂಚಿತರಾಗಬಾರದು. ಈ ನಿಟ್ಟಿನಲ್ಲಿ ಅಧಿಕಾರಿಗಳು ಅಗತ್ಯ ಕ್ರಮ ಕೈಕೊಂಡು ರೈತರಿಗೆ ಸರಕಾರದ ಸೌಲಭ್ಯ ಸಮರ್ಪಕವಾಗಿ ಸಿಗುವಂತೆ ಮಾಡಬೇಕು.
>
> **- ಮಹಾಂತೇಶ ದಶಮನಿ.**
> **ಡಿ.ಕೆ.ಶಿ ಅಭಿಮಾನಿ ಬಳಗದ ಜಿಲ್ಲಾ ಕಾರ್ಯಾಧ್ಯಕ್ಷ.**

ಈ ಕುರಿತು ಪ್ರತಿಕ್ರಿಯಿಸಿದ ಸಹಾಯಕ ಕೃಷಿ ನಿರ್ದೇಶಕ ರೇವಣೆಪ್ಪ ಮನಗೂಳಿ, 2023-24ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಮಾಡಲಾದ ಬೆಳೆ ವಿಮೆ ಮತ್ತು ಬೆಳೆ ಸಮೀಕ್ಷೆಯಲ್ಲಿ ಶಿರಹಟ್ಟಿ ತಾಲೂಕಿನ 27, ಲಕ್ಷ್ಮೇಶ್ವರ ತಾಲೂಕಿನ 40 ರೈತ ಫಲಾನುಭವಿಗಳ ದಾಖಲೆಗಳಲ್ಲಿ ವ್ಯತ್ಯಾಸ ಬಂದಿದೆ. ಈ ರೈತರು ತಮ್ಮ ಆಕ್ಷೇಪಣೆ ಇದ್ದರೆ ನಮೂದಾದ ಬೆಳೆಯ ಉತಾರ, ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಬೆಳೆ ಮಾರಾಟ ಮಾಡಿದ್ದಕ್ಕೆ ಅದರ ರಸೀದಿ ಅಥವಾ ಎಪಿಎಂಸಿಯಲ್ಲಿ ಮಾರಾಟ ಮಾಡಿದ್ದರ ರಸೀದಿಗಳೊಂದಿಗೆ ಮಾ.3 ಒಳಗೆ ರೈತ ಸಂಪರ್ಕ ಕೇಂದ್ರ ಶಿರಹಟ್ಟಿ-ಲಕ್ಷ್ಮೇಶ್ವರದಲ್ಲಿ ಅರ್ಜಿ ಸಲ್ಲಿಸಬೇಕು ಎಂದರು.

## ಶಿಗ್ಲಿ ಗ್ರಾ.ಪಂ ಅಧ್ಯಕ್ಷರ ಆಯ್ಕೆ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಶಿಗ್ಲಿ ಗ್ರಾಮ ಪಂಚಾಯಿತಿಯ ಅಧ್ಯಕ್ಷರಾಗಿ ಸಂಗೀತಾ ರಾಘವೇಂದ್ರ ಪೂಜಾರ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ದುಂಡವ್ವ ಹಾದಿಮನಿ ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ್ದರಿಂದ ತೆರವಾದ ಸ್ಥಾನಕ್ಕೆ ಶುಕ್ರವಾರ ಚುನಾವಣೆ ಪ್ರಕ್ರಿಯೆ ನಡೆಯಿತು. ಒಟ್ಟು 28 ಸದಸ್ಯರನ್ನೊಳಗೊಂಡ ಗ್ರಾ.ಪಂ ಅಧ್ಯಕ್ಷ ಸ್ಥಾನಕ್ಕೆ ಸಂಗೀತಾ ಪೂಜಾರ ಅವರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು. ತಾ.ಪಂ ಇಓ ಕೃಷ್ಣಪ್ಪ ಧರ್ಮರ ಚುನಾವಣಾಧಿಕಾರಿಯಾಗಿ ಕಾರ್ಯನಿರ್ವಹಿಸಿದರು.

ಸದಸ್ಯರಾದ ಶಿವಣ್ಣ ಕುರಿ, ಬಸಣ್ಣ ಕರ್ಜಗಿ, ಯಲ್ಲಪ್ಪ ತಳವಾರ, ಕೃಷ್ಣ ಬಿದರಹಳ್ಳಿ, ಸಂತೋಷ ತಾಂದಳೆ, ಸುರೇಶ ಸ್ವಾದಿ, ಗಣೇಶ ಲಮಾಣಿ, ರಮೇಶ ಹಣಗಿ, ಮುದಕಣ್ಣ ಗಾಡದ, ಈರಣ್ಣ ಅಂಬಲಿ, ಗುಲ್ಜರಾಭಾನು ಶೇಖ್, ಮಮತಾಜಿ ಶಿರಬಡಗಿ, ಶೈಲಜಾ ಹೂಗಾರ, ನೀಲಮ್ಮ ಸುರಣಗಿ, ಶೈಲಜಾ ಜನಿವಾರದ, ರೇಣುಕಾ ಆತಡಕರ, ಮಹದೇವಿ ತಳವಾರ, ಜಯಶ್ರೀ ತಳವಾರ, ಜಯಶ್ರೀ ಕರ್ಜಗಿ, ಈರಮ್ಮ ಮಾದನಹಳ್ಳಿ, ದುಂಡಮ್ಮ ಹಾದಿಮನಿ, ಲಲಿತಾ ತವರಿ, ಭರತ ಬಳಿಗಾರ ಉಪಸ್ಥಿತರಿದ್ದರು.

# ಸರಕಾರಿ ಶಾಲೆಗಳ ಅಭಿವೃದ್ಧಿಗೆ ಸಹಕರಿಸಿ

**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಸರಕಾರಿ ಶಾಲೆಗಳ ಸರ್ವತೋಮುಖ ಅಭಿವೃದ್ಧಿಗೆ ಜನಪ್ರತಿನಿಧಿಗಳ ಸಹಕಾರ ಅಗತ್ಯ ಎಂದು ಗದಗ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ ಹೇಳಿದರು.

ಅವರು ಪಟ್ಟಣದ ಸರಕಾರಿ ಹಿರಿಯ ಪ್ರಾಥಮಿಕ ಹೆಣ್ಣು ಮಕ್ಕಳ ಶಾಲೆಯ ವಾರ್ಷಿಕ ಸ್ನೇಹ ಸಮ್ಮೇಳನ ಉದ್ಘಾಟಿಸಿ, ಸನ್ಮಾನ ಸ್ವೀಕರಿಸಿ ಮಾತನಾಡಿ, ಸರಕಾರಿ ಶಾಲೆಗಳ ಮಕ್ಕಳು ಎಂದೆಂದಿಗೂ ಶಿಕ್ಷಣದಲ್ಲಿ ಮುಂದಿದ್ದು, ಸರಕಾರಿ ಶಾಲೆಗಳು ಸಾರ್ವಜನಿಕರು, ಪಾಲಕರು, ಜನಪ್ರತಿನಿಧಿಗಳ ಸಹಾಯ-ಸಹಕಾರದಿಂದ ಇಂದು ಪ್ರಗತಿ ಹಂತದಲ್ಲಿ ಮುಂದುವರೆಯುತ್ತಿವೆ. ಮಕ್ಕಳು ಶೈಕ್ಷಣಿಕವಾಗಿ ಅಭಿವೃದ್ಧಿ ಹೊಂದಲು ಸರಕಾರ ಹತ್ತು ಹಲವಾರು ಯೋಜನೆಗಳನ್ನು ಜಾರಿಗೊಳಿಸುತ್ತಿದೆ ಎಂದರು.



ಶಾಲಾ ಪ್ರಧಾನ ಗುರು ಡಾ. ಎಸ್.ವಿ. ತಮ್ಮನಗೌಡ್ರ, ಎಸ್‌ಡಿಎಂಸಿ ಅಧ್ಯಕ್ಷ ಮಾಹಾಂತೇಶ ಕಣವಿ, ಗೌರಮ್ಮಾ ಬಡ್ನಿ, ವಿಜಯ ನೀಲಗುಂದ, ಎಸ್.ಸಿ. ಬಡ್ನಿ, ಕೆ.ಎಲ್. ಕರಿಗೌಡ್ರ, ಪಿ.ಎಸ್. ಮರಿದೇವರಮಠ, ಆರ್.ಎಂ. ರೋಣದ, ಎಸ್.ಪಿ. ಸರ್ವದೆ, ಕೆ.ಎಸ್. ಗಾಣಿಗೇರ, ಬಸಮ್ಮಾ ಲದ್ದಿ, ಹರ್ಷಲತಾ ದೇಶಪಾಂಡೆ, ಪ್ರೇಮಾ ಬಡ್ನಿ, ಎಸ್‌ಡಿಎಂಸಿ ಸರ್ವ ಸದಸ್ಯರು ಇದ್ದರು.

## ಯೋಜನೆಗಳು ಸಮರ್ಪಕವಾಗಿ ತಲುಪಲಿ

▸▸ ಮೊದಲನೇ ಪುಟದಿಂದ

ಇದಕ್ಕೆ ಪ್ರತಿಕ್ರಿಸಿದ ಸಂಸದ ಬಸವರಾಜ್ ಬೊಮ್ಮಾಯಿ, ಗದಗ ಜನ ಸಹನೆಯುಳ್ಳವರು. ನೀವು 15 ದಿನಕ್ಕೊಮ್ಮೆ ನೀರು ಬಿಡುತ್ತಿರುವುದು ನನ್ನ ಗಮನಕ್ಕಿದೆ. ಕೆಲವು ಪ್ರದೇಶಗಳಲ್ಲಿ ಮಾತ್ರವೇ 5-6 ದಿನಕ್ಕೊಮ್ಮೆ ನೀರು ಸರಬರಾಜಾಗುತ್ತಿದೆ ಎಂದರು.

ಬೇಸಿಗೆ ಆರಂಭವಾಗುತ್ತಿದೆ, ಜನಸಾಮಾನ್ಯರಿಗೆ ನಿಯಮಿತವಾಗಿ ಅಗತ್ಯಕ್ಕೆ ತಕ್ಕಂತೆ ನೀರು ಸರಬರಾಜು ಆಗಬೇಕು. ಕನಿಷ್ಠ ಮೂರು ದಿನಕ್ಕೊಮ್ಮೆ ನೀರು ಒದಗಿಸಲು ಕ್ರಮ ವಹಿಸಬೇಕೆಂದು ತಿಳಿಸಿದರು.

ಜಲಜೀವನ ಮಿಷನ್ ಕೇಂದ್ರ ಸರಕಾರದ ಮಹತ್ವಾಕಾಂಕ್ಷಿ ಯೋಜನೆಯಾಗಿದ್ದು,

ಈಗಾಗಲೇ ಗ್ರಾಮಗಳಲ್ಲಿ ಮನೆಗಳ ಮುಂದೆ ನಳಗಳು ಇವೆ. ಆದರೆ ಅದರಲ್ಲಿ ನೀರು ಬರಲಾರದಂತಹ ಘಟನೆಗಳು ಕಂಡುಬಂದಿದ್ದು, ಜಿ.ಪಂ ಸಿಇಓ ಅವರು ಕಾಳಜಿವಹಿಸಿ ಪ್ರತಿಯೊಬ್ಬರಿಗೂ ಉತ್ತಮ ಕುಡಿಯುವ ನೀರು ಕೊಡಿಸುವ ವ್ಯವಸ್ಥೆ ಆಗಬೇಕು ಎಂದ ಹೇಳಿದು.

ಗದಗ ಜಿಲ್ಲೆ ತುಂಗಭದ್ರ ಮತ್ತು ಮಲಪ್ರಭಾ ನದಿಗಳನ್ನು ಹೊಂದಿದ್ದು, ತೋಟಗಾರಿಗೆ ಬೆಳೆಗೆ ಸಾಕಷ್ಟು ಅವಕಾಶಗಳನ್ನು ಹೊಂದಿದೆ. ಹಾಗಾಗಿ ತೋಟಗಾರಿಕೆ ಜಿಲ್ಲೆಯನ್ನಾಗಿಸಲು ಅಧಿಕಾರಿಗಳು ಶ್ರಮವಹಿಸಬೇಕು ಎಂದರು.

ಈ ಸಂದರ್ಭದಲ್ಲಿ ಆರೋಗ್ಯ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಕಲ್ಯಾಣ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಕುರಿತು ಚರ್ಚಿಸಲಾಯಿತು.

ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, ಬೆಳ್ಳಟ್ಟಿ, ಬನ್ನಿಕೊಪ್ಪ, ಹೆಬ್ಬಾಳ ಗ್ರಾಮಗಳಲ್ಲಿ ಈ ಹಿಂದೆ ಚರ್ಚಿಸಿದಂತೆ ಗ್ರಾಮಗಳಲ್ಲಿರುವ ಪಿಎಚ್‌ಸಿಗಳಿಗೆ ವೈದ್ಯರನ್ನು ನಿಯೋಜಿಸಿ ಗ್ರಾಮೀಣ ಭಾಗದ ಜನರಿಗೆ ವೈದ್ಯಕೀಯ ಸೌಲಭ್ಯ ದೊರೆಯುವಂತೆ ಮಾಡಬೇಕು ಎಂದು ಹೇಳಿದರು.

ಸಭೆಯಲ್ಲಿ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ, ಜಿ.ಪಂ ಮುಖ್ಯ ಯೋಜನಾಧಿಕಾರಿ ನಿರ್ಮಲ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಅಧಿಕಾರಿ ಡಾ. ಎಸ್.ಎಸ್. ನೀಲಗುಂದ, ತೋಟಗಾರಿಕೆ ಇಲಾಖೆ ಉಪನಿರ್ದೇಶಕ ಶಶಿಕಾಂತ ಕೋಟೆಮನೆ ಸೇರಿದಂತೆ ಇತರ ಇಲಾಖೆ ಅಧಿಕಾರಿಗಳು ಹಾಜರಿದ್ದರು.

# ಅಂತಾರಾಷ್ಟ್ರೀಯ ಸಾಮಾಜಿಕ ನ್ಯಾಯ ದಿನಾಚರಣೆ

**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ತಾಲೂಕು ಕಾನೂನು ಸೇವಾ ಸಮಿತಿ, ವಕೀಲರ ಸಂಘ ಶಿರಹಟ್ಟಿ ಹಾಗೂ ಎಫ್.ಎಂ. ಡಬಾಲಿ ಪಿಯು ಕಾಲೇಜಿನ ಸಹಯೋಗದಲ್ಲಿ ಅಂತಾರಾಷ್ಟ್ರೀಯ ಸಾಮಾಜಿಕ ನ್ಯಾಯ ದಿನಾಚರಣೆ ಆಚರಿಸಲಾಯಿತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ದಿವಾಣಿ ನ್ಯಾಯಾಧೀಶ ಸತೀಶ್ ಎಂ, ಮಾನವ ಹಕ್ಕುಗಳ ರಕ್ಷಣೆಯಲ್ಲಿ ಸಾಮಾಜಿಕ ನ್ಯಾಯವು ಅವಶ್ಯವಾಗಿದೆ. ಈ ದೇಶದ ಪ್ರತಿಯೊಬ್ಬ ಪ್ರಜೆಯೂ ಹಕ್ಕುಗಳನ್ನು ಪಡೆಯುವುದರ ಜೊತೆಗೆ ಸಂವಿಧಾನಿಕ ಕರ್ತವ್ಯಗಳನ್ನು ಮರೆಯಬಾರದು. ಯುವ ಜನಾಂಗ ಸರಿಯಾದ ತಿಳುವಳಿಕೆಯ ಮೂಲಕ ಸಾಮಾಜಿಕ ಬದ್ಧತೆಯೊಂದಿಗೆ ವ್ಯಕ್ತಿತ್ವ ನಿರ್ಮಾಣ ಮಾಡಿಕೊಳ್ಳಬೇಕೆಂದು ಹೇಳಿದರು.



ಕಾಲೇಜಿನ ಪ್ರಾಚಾರ್ಯ ಎಂ.ಸಿ. ಭಜಂತ್ರಿ ಮಾತನಾಡಿ, ದೇಶದ ಪ್ರಜೆಯಾಗಿ ಕಾನೂನನ್ನು ಗೌರವಿಸುವುದು ಹಾಗೂ ಕಾನೂನಿನ ನಿಯಮಗಳನ್ನು ತಪ್ಪದೇ ಪಾಲಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ಹಾಗೆಯೇ ಇಂದಿನ ಮಕ್ಕಳನ್ನು ಸದೃಢ ಸಮಾಜಕ್ಕೆ ನಿರ್ಮಾಣಗೊಳಿಸುವಲ್ಲಿ ಇಂತಹ ಸಂವಿಧಾನಿಕ ನಿಯಮಗಳನ್ನು ಕರ್ತವ್ಯಗಳನ್ನು ಜ್ಞಾಪಿಸುವ ಅವಶ್ಯಕತೆ ಇದೆ. ಇಂದಿನ ಯುವ ಜನಾಂಗ ಕಾನೂನಿನ ತಿಳುವಳಿಕೆ ಇಲ್ಲದೆ ಅದೆಷ್ಟೋ ತಪ್ಪುಗಳನ್ನು ಮಾಡುತ್ತಿರುವುದು ಕಂಡುಬರುತ್ತಿದ್ದು, ಇವೆಲ್ಲವುಗಳನ್ನು ತಡೆಗಟ್ಟುವುದು ಪ್ರಜ್ಞಾವಂತ ಸಮಾಜದ ಪ್ರತಿಯೊಬ್ಬ ಪ್ರಜೆಯ ಜವಾಬ್ದಾರಿಯಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಪಿ.ಎಂ. ವಾಲಿ, ಅನಿಲ ಮಾನೆ, ಶಿವನಗೌಡ ಪಾಟೀಲ, ಉಪನ್ಯಾಸಕರಾದ ಎಂ.ಕೆ. ಲಮಾಣಿ, ಸುಧಾ ಹುಚ್ಚಣ್ಣವರ, ಮಧು ಗಾಣಗೇರ, ಸಿ.ಎಲ್. ಜಾಧವ, ಎ.ಎ. ಬಾಬುಖಾನವರ, ಎಂ.ಎಂ. ನದಾಫ್, ವೈ.ಎಸ್. ಪಂಗಣ್ಣವರ, ಬಸವರಾಜ ಶಿರುಂದ, ಪ್ರವೀಣ ಹೊಸೂರ ಮುಂತಾದವರು ಉಪಸ್ಥಿತರಿದ್ದರು.

# ಎಪಿಎಲ್ ಸೀಜನ್-1 ಕ್ರಿಕೆಟ್ ಸಮಾರೋಪ

**■ವಿಜಯಸಾಕ್ಷಿ ಸುದ್ದಿ, ಗದಗ**

ಡಾ. ಎಚ್.ಕೆ. ಪಾಟೀಲ ಅಭಿಮಾನಿಗಳ ಬಳಗದ ವತಿಯಿಂದ ನರಸಾಪೂರ ಆಶ್ರಯ ಕಾಲೋನಿಯಲ್ಲಿ ಎಪಿಎಲ್ ಸೀಜನ್ ಒನ್ ಕ್ರಿಕೆಟ್ ಲೀಗ್‌ನ ಸಮಾರೋಪ ಸಮಾರಂಭ ಜರುಗಿತು.

ಕ್ರೀಡಾ ಪ್ರೇಮಿಗಳು ಹಾಗೂ ಕಾಂಗ್ರೆಸ್ ಮುಖಂಡರಾದ ಸಾದಿಕ್ ನರಗುಂದ ಮುಖ್ಯ ಅತಿಥಿಗಳಾಗಿ ಆಗಮಿಸಿ ಮಾತನಾಡಿ, ಕ್ರೀಡಾಕೂಟದಲ್ಲಿ ಸೋಲು-ಗೆಲವು ಸಹಜ. ಪಾಲ್ಗೊಳ್ಳುವಿಕೆ ಮುಖ್ಯವಾಗುತ್ತದೆ. ಆದ್ದರಿಂದ ಯುವಕರು ಒಳ್ಳೆಯ ಹವ್ಯಾಸಗಳನ್ನು ರೂಢಿಸಿಕೊಂಡು ಉತ್ತಮ ಪ್ರಜೆಗಳಾಗಿರಿ ಎಂದು ಹೇಳಿ, ಲೀಗ್ ಮ್ಯಾಚ್‌ನಲ್ಲಿ ವಿಜೇತರಾದ ಮುಂಬಯಿ ತಂಡಕ್ಕೆ ಬಹುಮಾನ ಹಾಗೂ ಕಪ್ ವಿತರಿಸಿ ಅಭಿನಂದಿಸಿದರು.

ಸಭೆಯ ಅಧ್ಯಕ್ಷತೆಯನ್ನು ಕ್ರಿಕೆಟ್ ವ್ಯವಸ್ಥಾಪಕ, ಕಾಂಗ್ರೆಸ್ ಮುಖಂಡರಾದ ಶಾಕೀರ ಕಾತರಕಿ ವಹಿಸಿ ಮಾತನಾಡಿ, ಸತತ ನಾಲ್ಕು ದಿನಗಳವರೆಗೆ ಉತ್ತಮ ಆಟವಾಡಿದ ಎಲ್ಲಾ ಆಟಗಾರರಿಗೆ ಅಭಿನಂದಿಸಿ, ಎಲ್ಲರ ಸಹಕಾರದಿಂದ ಎಪಿಎಲ್ ಸೀಜನ್ ಒನ್ ಲೀಗ್ ಕ್ರಿಕೆಟ್ ಯಶಸ್ವಿಯಾಗಿದೆ. ಮುಂದಿನ ಸೀಜನ್-2 ಲೀಗ್‌ನಲ್ಲಿ ಹೆಚ್ಚಿನ ಯುವಕರು ಪಾಲ್ಗೊಳ್ಳಿ ಎಂದರು.




ಈ ಸಂದರ್ಭದಲ್ಲಿ ಸಂಗಮೇಶ ಹಾದಿಮನಿ, ಮುಂಬೈ ಟೀಮ್ ಮಾಲಕರಾದ ತಾಹೀರ್ ಮುಲ್ಲಾ, ಕ್ಯಾಪ್ಟನ್ ರಾಜು ಭರಮಣ್ಣವರ, ರನ್ನರ್ ಆಫ್ ಟೀಮ್ ಕೊಲ್ಕತ್ತಾ ಮಾಲಕ ಲಿಯಾಕಾತ, ಲಕ್ಷೇಶ್ವರ ಕ್ಯಾಪ್ಟನ್ ಸಗೀರ್ ಹಣಗಿ, ರಾಮಣ್ಣ ರಾಂಪುರ್, ಬೋದ್ಲೆಖಾನ್, ಬಸನಗೌಡ ಮಲ್ಲಾಪುರ್, ಮಲಿಕ್ ಮೆಹಬೂಬ, ಇರ್ಫಾನ್, ವೆಂಕಟೇಶ್, ಸಾಗರ್, ಬಸು ಹದ್ದಣ್ಣವರ್, ಸಲೀಂ ಕಾತರಕಿ, ಮಲ್ಲಾಪುರ್ ಗೌಡ್ರು, ರಿಯಾಜ್ ದಾಯಮ್ಮನವರ, ರಾಜು ಹಣಗಿ, ಮಹಮ್ಮದ್ ಮದಲಿವಾಲೆ, ವಾಸು ಜೋಗಿ, ಕಮರ್ ಅಲಿ ಬೇಗ್ ಸೇರಿದಂತೆ ಬಡಾವಣೆಯ ಯುವಕರು ಹಿರಿಯರು ಪಾಲ್ಗೊಂಡಿದ್ದರು.

## ಹಿರಿಯ ಗುರುಗಳ ಜೀವನವೇ ಒಂದು ಸಂದೇಶ

▸▸ ಮೊದಲನೇ ಪುಟದಿಂದ

ಇತ್ತೀಚಿನ ದಿನಗಳಲ್ಲಿ ನಾಗರಿಕತೆ ಮತ್ತು ಸಂಸ್ಕೃತಿ ನಡುವಿನ ವ್ಯತ್ಯಾಸ ಗೊತ್ತಿಲ್ಲ. ನಮ್ಮ ಹತ್ತಿರ ಏನಿದೆಯೋ ಅದು ನಾಗರಿಕತೆ, ನಾವೇನಾಗಿದ್ದೇವೆಯೋ ಅದು ಸಂಸ್ಕೃತಿ. ಈಗಿನ ಪರಪೂಜ್ಯರು ನಾಗನೂರು ಭಾಗದಲ್ಲಿ ಬಸವ ತತ್ವ ಪ್ರಚಾರ ಮಾಡಿ ಕ್ರಾಂತಿ ಮಾಡಿದ್ದಾರೆ.

ಅವರ ನೇತೃತ್ವದಲ್ಲಿ ತೋಂಟದಾರ್ಯ ಮಠದ ಪರಂಪರೆ ಮುಂದುವರೆಯುತ್ತಿರುವುದು ಸಂತಸದ ವಿಷಯ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ತೋಂಟದಾರ್ಯ ಮಠದ ಪೀಠಾಧ್ಯಕ್ಷರಾದ ಡಾ. ತೋಂಟದ ಸಿದ್ದರಾಮ ಮಹಾಸ್ವಾಮೀಜಿ ದಿವ್ಯ ಸಾನ್ನಿಧ್ಯ ವಹಿಸಿದ್ದರು. ನಿಜಗುಣಪ್ರಭು ತೋಂಟದಾರ್ಯಮಠ, ಶಾಂತಲಿಂಗ ದೇಶಿಕೇಂದ್ರ ಸ್ವಾಮೀಜಿ, ಶೀ ಪೂರ್ಣೇಶ್ವರ ಮಹಾಸ್ವಾಮಿ, ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಮಾಜಿ ಸಚಿವರಾದ ಸಿ.ಸಿ. ಪಾಟೀಲ, ಶಾಸಕ ಜಿ.ಎಸ್. ಪಾಟೀಲ್, ಮಾಜಿ ಸಂಸದ ಐ.ಜಿ. ಸನದಿ, ಪದ್ಮಶ್ರೀ ಭೀಮವ್ವ ಶಿಳ್ಳೇಕ್ಯಾತರ ಸೇರಿದಂತೆ ಅನೇಕ ಗಣ್ಯರು ಹಾಜರಿದ್ದರು.

# ಪ್ರಾಥಮಿಕ ಶಿಕ್ಷಣ ಅತ್ಯಗತ್ಯ




**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಪ್ರಾಥಮಿಕ ಶಿಕ್ಷಣ ಪಡೆಯುವುದು ಪ್ರತಿಯೊಬ್ಬರಿಗೂ ಅವಶ್ಯಕವಾಗಿದೆ ಎಂದು ಶಾಲಾ ಪ್ರಧಾನ ಗುರು ಎಚ್.ಟಿ. ಕಟ್ಟಿಮನಿ ಹೇಳಿದರು.

ಅವರು ಪಟ್ಟಣದ ವಿದ್ಯಾನಗರದ ಸರಕಾರಿ ಕಿರಿಯ ಪ್ರಾಥಮಿಕ ಶಾಲೆಯ ವಾರ್ಷಿಕ ಸ್ನೇಹ ಸಮ್ಮೇಳನ ಉದ್ಘಾಟಿಸಿ ಮಾತನಾಡಿ, ಪ್ರಾಥಮಿಕ ಶಿಕ್ಷಣವನ್ನು ಪ್ರತಿಯೊಬ್ಬ ಮಗುವೂ ಪಡೆಯಲೇಬೇಕು. ಸರಕಾರಿ ಶಾಲೆಗಳಲ್ಲಿ ನುರಿತ ಗುಣಮಟ್ಟದ ಶಿಕ್ಷಕ ವೃಂದವಿದ್ದು, ಮಕ್ಕಳ ಕಲಿಕೆಗಾಗಿ ಸರಕಾರ ಹಲವಾರು ಯೋಜನೆಗಳ ಮೂಲಕ ನೆರವಾಗುತ್ತಿದೆ. ಪಾಲಕರು ತಪ್ಪದೇ ಮಕ್ಕಳನ್ನು ಶಾಲೆಗೆ ಕಳಿಸಬೇಕು ಎಂದರು.

ಶಿಕ್ಷಕಿ ಆರ್.ಸಿ. ಸೈದಾಪೂರ, ಎಸ್‌ಡಿಎಂಸಿ ಅಧ್ಯಕ್ಷ ರಹಮತಬಿ ಹಾದಿಮನಿ, ಎಂ.ಎಚ್. ಶಿರಹಟ್ಟಿ, ಎಚ್.ಕೆ. ಕುಂದಗೋಳ, ರೇಷ್ಮಾ ಢಾಲಾಯತ, ಅಮೀನಾ ಕೂಡಲಗಿ, ರತ್ನಾ ಗೌಳಿ, ಹುಸೇಣಸಾಬ ಹುಬ್ಬಳ್ಳಿ, ರವಿರಾಜ ಮಟ್ಟಿ, ಜೀಲಾನಿ ಮುಜಾವಾರ ಇದ್ದರು.

# ಒಂದು ದಿನದ ವಿಶೇಷ ಸಹಕಾರ ತರಬೇತಿ ಶಿಬಿರ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು, ಗದಗ ಜಿಲ್ಲಾ ಸಹಕಾರ ಯೂನಿಯನ್ ನಿ., ಗದಗ ಹಾಗೂ ಸಹಕಾರ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಗದಗ ಜಿಲ್ಲೆಯ ಎಲ್ಲಾ ಪಟ್ಟಣ ಸಹಕಾರ ಬ್ಯಾಂಕ್‌ಗಳ ಮತ್ತು ಪತ್ತಿನ ಸಹಕಾರ ಸಂಘಗಳ ಅಧ್ಯಕ್ಷರು, ಮುಖ್ಯ ಕಾರ್ಯನಿರ್ವಾಹಕರು ಹಾಗೂ ಸಿಬ್ಬಂದಿಗಳಿಗೆ ಒಂದು ದಿನದ ವಿಶೇಷ ಸಹಕಾರ ತರಬೇತಿ ಶಿಬಿರ ಫೆಬ್ರವರಿ 22 ರಂದು ಬೆಳಿಗ್ಗೆ 9–00 ಘಂಟೆಗೆ ಗದಗನ ಮಕಾನಗಲ್ಲಿಯಲ್ಲಿ ಇರುವ ಮರ್ಚಂಟ್ಸ್ ಲಿಬರಲ್ ಕೋ–ಆಪ್ ಬ್ಯಾಂಕ್ ಲಿ. ಸಭಾಭವನದಲ್ಲಿ ಜರುಗಲಿದೆ. ಮರ್ಚಂಟ್ಸ್ ಲಿಬರಲ್ ಕೋ–ಆಪ್ ಬ್ಯಾಂಕ್ ಲಿ., ಗದಗ ಇದರ ಅಧ್ಯಕ್ಷರಾದ ಮೋಹನ್ ಟಿ.ಕೋಟಿ ಅವರು ಕಾರ್ಯಕ್ರಮ ಉದ್ಘಾಟಿಸುವರು. ಗದಗ ಜಿಲ್ಲಾ ಸಹಕಾರ ಯೂನಿಯನ್‌ನ ಅಧ್ಯಕ್ಷರಾದ ಸಿ. ಎಂ. ಪಾಟೀಲ ಅಧ್ಯಕ್ಷತೆ ವಹಿಸುವರು.ಗದಗ ಜಿಲ್ಲಾ ಸಹಕಾರ ಯೂನಿಯನ್‌ನ ಉಪಾಧ್ಯಕ್ಷರಾದ ವಾಯ್. ಎಫ್. ಪಾಟೀಲ, ಗದಗ ಜಿಲ್ಲಾ ಸಹಕಾರ ಯೂನಿಯನ್ ನಿ., ಗದಗ ನಿರ್ದೇಶಕರುಗಳಾದ ಎಂ. ಎಫ್. ಕಲಗುಡಿ, ಎಸ್. ಎಸ್. ಪಟ್ಟಣಶೆಟ್ಟಿ, ಎಸ್. ಕೆ. ಕುರಡಗಿ, ಸಹಕಾರ ಸಂಘಗಳ ಉಪನಿಬಂಧಕರಾದ ಶ್ರೀಮತಿ ಎಸ್. ಎಸ್. ಕಬಾಡೆ ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆಯ ಉಪನಿರ್ದೇಶಕರಾದ ಅರವಿಂದ ಎನ್. ನಾಗಜ್ಜನವರ, ಸಹಕಾರ ಸಂಘಗಳ ಸಹಾಯಕ ನಿಬಂಧಕರಾದ ಶ್ರೀಮತಿ ಪುಷ್ಪಾ ಕೆ. ಕಡಿವಾಳ, ಶಿರಹಟ್ಟಿ, ಮುಂಡರಗಿ, ರೋಣ ತಾಲೂಕುಗಳ ಸಹಕಾರ ಅಭಿವೃದ್ಧಿ ಅಧಿಕಾರಿಗಳಾದ ಕೆ. ಸಿ. ಕೂಸನೂರಮಠ, ಚಂದ್ರಶೇಖರ ಲಮಾಣಿ, ಪ್ರಶಾಂತ ಮುಧೋಳ, ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಚೇರಿ ಗದಗ ಇದರ ಮಾರಾಟಾಧಿಕಾರಿಗಳಾದ ಬಿ. ಆರ್. ನಿಡಗುಂದಿ, ನರಗುಂದ ಹಾಗೂ ಗದಗ ತಾಲೂಕುಗಳ ಸಹಕಾರ ಅಭಿವೃದ್ಧಿ ಅಧಿಕಾರಿಗಳಾದ ಪ್ರಕಾಶ ನವಲಗುಂದ, ಶ್ರೀಮತಿ ಶಾಂತಾ ಎಚ್. ಎಂ. ಮುಖ್ಯ ಅತಿಥಿ ಸ್ಥಾನವನ್ನು ಅಲಂಕರಿಸುವರು. ಎಂದು ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಚಂದ್ರಶೇಖರ ಎಸ್. ಕರಿಯಪ್ಪನವರ ತಿಳಿಸಿದ್ದಾರೆ. ತರಬೇತಿ ಕಾರ್ಯಾಗಾರದಲ್ಲಿ ಪಟ್ಟಣ ಸಹಕಾರ ಬ್ಯಾಂಕುಗಳು ಮತ್ತು ಪತ್ತಿನ ಸಹಕಾರ ಸಂಘಗಳು ಎದುರಿಸುತ್ತಿರುವ ಸವಾಲುಗಳು ಹಾಗೂ ಪರಿಹಾರಗಳ ಕುರಿತು ಆದಾಯ, ವೃತ್ತಿ ಮತ್ತು ಸರಕು ಸೇವಾ ತೆರಿಗೆಗಳು (ಜಿಎಸ್‌ಟಿ) ಕುರಿತು ಬಿ. ವ್ಹಿ. ರವೀಂದ್ರನಾಥ ಚಾಟರ್ಡ್ ಅಕೌಂಟೆಂಟ್ ಸಾಗರ, ಸಾಲ ವಸೂಲಾತಿ ವಿಧಿ ವಿಧಾನಗಳ ಕುರಿತು ಪ್ರಶಾಂತ ಮುಧೋಳ, ಸಹಕಾರ ಅಭಿವೃದ್ಧಿ ಅಧಿಕಾರಿಗಳು, ರೋಣ ಇವರು ಉಪನ್ಯಾಸ ನೀಡುವರು.

# ಶಿವಾನಂದ ಪಟ್ಟಣಶೆಟ್ಟರರಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ಅಥಣಿಯ ಮೋಟಗಿ ಮಠದಿಂದ ಕೊಮಾಡುವ 'ಸಮಾಜಸೇವಾ ಭೂಷಣ' ಪ್ರಶಸ್ತಿಗೆ ಪಾತ್ರರಾದ ತೋಂಟದಾರ್ಯ ವಿದ್ಯಾಪೀಠದ ಆಡಳಿತಾಧಿಕಾರಿ ಶಿವಾನಂದ ಪಟ್ಟಣಶೆಟ್ಟರ ಅವರನ್ನು ಅವ್ವ ಸೇವಾ ಟ್ರಸ್ಟ್ ವತಿಯಿಂದ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಡಾ. ಬಸವರಾಜ ಧಾರವಾಡ, ಕ್ಷೇತ್ರ ಶಿಕ್ಷಣಾಧಿಕಾರಿ ರವೀಂದ್ರ ಶೆಟ್ಟೆಪ್ಪನವರ, ಶಿಕ್ಷಣ ಇಲಾಖೆಯ ಶಂಕರ ಹಡಗಲಿ, ಶಾಮ ಲಾಂಡೆ, ಆಯ್.ಬಿ. ಮಡಿವಾಳರ, ಶಂಕ್ರಮ್ಮ ಆರ್. ಹಣಮಗೌಡ್ರು, ಎಂ.ಐ. ಶಿವನಗೌಡ್ರು, ಮಂಜುಳಾ ಪಿ.ಸಾಮ್ರಾಣಿ, ಸುಮಂಗಲ ಎಂ.ಪತ್ತಾರ್, ಶಾರದಾ ಬಾಣದ, ಶೋಭಾ ಎಸ್. ಗಾಳಿ, ರಮೇಶ್ ಬಸರಿ, ಸಾವಿತ್ರಿ ಎ.ಗದ್ದನಕೇರಿ, ಎನ್.ಆರ್. ಶಿರೋಳ್, ಸಬಿಯಾ ಯು.ಕುಷ್ಟಗಿ, ಗಂಗಾ ಎಂ.ಅಳವಂಡಿ, ಮಂಜುಳಾ ಟಿ, ಪದ್ಮಾ ವಿ.ದಾಸರ್, ಲಕ್ಷ್ಮಮ್ಮ ಮಾಳೋತ್ತರ್, ಶಶಿಕಲಾ ಬಿ.ಗುಳೇದವರ, ಸಂಜೀವಿನಿ ಕೂಲಗುಡಿ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು. ಶಾರದಾ ಬಾಣದ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

# ವಕ್ಫ್ ಸಂಸ್ಥೆಗಳಗೆ ಮಾಡ್ಯುಲರ್ ಫ್ರೀಜರ್ ವಿತರಣೆ



■ವಿಜಯಸಾಕ್ಷಿ ಸುದ್ದಿ, ಗದಗ

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಬೆಂಗಳೂರು ವತಿಯಿಂದ ಗದಗ ಜಿಲ್ಲೆಯ ಆಯ್ದ ವಕ್ಫ್ ಸಂಸ್ಥೆಗಳಿಗೆ ಮೃತ ದೇಹವನ್ನು ಶೇಖರಿಸಲು ಮತ್ತು ಸುಗಮವಾಗಿ ಸಾಗಿಸಲು ಅನುಕೂಲವಾಗುವಂತೆ ಸುಸಜ್ಜಿತ ಮಾಡ್ಯುಲರ್ ಫ್ರೀಜರ್ ಬಾಕ್ಸ್ ವಿತರಣೆ ಕಾರ್ಯಕ್ರಮ ಜಾಕೀರ ಹುಸೇನ ಶಾದಿಮಹಲ್‌ನಲ್ಲಿ ಜರುಗಿತು.

ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ರೋಣ ಶಾಸಕ ಜಿ.ಎಸ್. ಪಾಟೀಲ ಮಾಡ್ಯುಲರ್ ಫ್ರೀಜರ್ ಬಾಕ್ಸ್ ವಿತರಿಸಿ ಮಾತನಾಡಿ, ಕರ್ನಾಟಕ ರಾಜ್ಯದ ಅಲ್ಪಸಂಖ್ಯಾತರ ಸಮುದಾಯದ ಸರ್ವತೋಮುಖ ಅಭಿವೃದ್ಧಿಗಾಗಿ ನಮ್ಮ ಸರ್ಕಾರ ಬಹಳಷ್ಟು ಯೋಜನೆಗಳನ್ನು ಜಾರಿಗೆ ತಂದಿದೆ. ಅದರ ಸದುಪಯೋಗ ಪಡೆದುಕೊಳ್ಳಲು ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ವಕ್ಫ್ ಸಲಹಾ ಸಮಿತಿಯ ಅಧ್ಯಕ್ಷ ಜಿ.ಎಮ್. ದಂಡಿನ್ ವಹಿಸಿಕೊಂಡಿದ್ದರು. ಅತಿಥಿಗಳಾಗಿ ಮಾಜಿ ಶಾಸಕ ಡಿ.ಆರ್. ಪಾಟಿಲ್, ನಗರಾಭಿವೃದ್ಧಿ ಕೋಶದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಯುವ ನಾಯಕ ಕೃಷ್ಣಗೌಡ ಪಾಟೀಲ್ ಭಾಗವಹಿಸಿದ್ದರು.

### ಲೀಡ್ ಬ್ಯಾಂಕ್‌ನ ಡಿಎಲ್‌ಆರ್‌ಸಿ/ಡಿಸಿಸಿ ಸಭೆಯಲ್ಲಿ ಸಂಸದ ಬಸವರಾಜ ಬೊಮ್ಮಾಯಿ

# ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದಿಂದ ಜಾರಿಗೊಂಡಿರುವ ವಿವಿಧ ಜನಪರ ಯೋಜನೆಗಳ ಆರ್ಥಿಕ ಸೌಲಭ್ಯವನ್ನು ಅರ್ಹ ಫಲಾನುಭವಿಗಳಿಗೆ ಒದಗಿಸುವಲ್ಲಿ ಬ್ಯಾಂಕ್ ನೌಕರರ ಪಾತ್ರ ಮಹತ್ವದ್ದಾಗಿದೆ. ಈ ನಿಟ್ಟಿನಲ್ಲಿ ಬ್ಯಾಂಕ್‌ನವರು ಸಾರ್ವಜನಿಕರೊಂದಿಗೆ ಸಹಕರಿಸಿ ಸೌಲಭ್ಯ ಒದಗಿಸಬೇಕು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದರಾದ ಬಸವರಾಜ ಬೊಮ್ಮಾಯಿ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಜರುಗಿದ ಲೀಡ್ ಬ್ಯಾಂಕ್‌ನ ಡಿಎಲ್‌ಆರ್‌ಸಿ/ ಡಿಸಿಸಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬಡಜನರು ಆರ್ಥಿಕವಾಗಿ ಸ್ವಾವಲಂಬನೆಯ ಬದುಕು ನಡೆಸಲು ಬ್ಯಾಂಕ್‌ಗಳು ಸಹಕಾರಿಯಾಗಬೇಕು. ಯೋಜನೆಗಳ ಆರ್ಥಿಕ ಸೌಲಭ್ಯ ಒದಗಿಸುವಾಗ ವಿನಾಕಾರಣ ವಿಳಂಬ ಮಾಡಬಾರದು. ಒಂದು ವೇಳೆ ಫಲಾನುಭವಿಗಳು ಅನಕ್ಷರಸ್ಥರಾಗಿದ್ದಲ್ಲಿ ಅವರಿಗೆ ಸೂಕ್ತ ಮಾರ್ಗದರ್ಶನ ನೀಡಿ ಸೌಲಭ್ಯ ಒದಗಿಸಲು ಸಹಕರಿಸಬೇಕು. ಲೀಡ್ ಬ್ಯಾಂಕ್‌ನ ಸಭೆಗೆ ಸಂಬಂಧಿತ ಎಲ್ಲ ಬ್ಯಾಂಕ್‌ನ ಅಧಿಕಾರಿಗಳು ಕಡ್ಡಾಯವಾಗಿ ಹಾಜರಿರಬೇಕು. ಬ್ಯಾಂಕ್‌ನವರು ಸಾಲ–ಠೇವಣಿ ಅನುಪಾತವನ್ನು ಹೆಚ್ಚಿಸುವಲ್ಲಿ ಅಗತ್ಯ ಕ್ರಮ ಕೈಗೊಳ್ಳಬೇಕು. ಆರ್ಥಿಕ ಗುರಿ ಶೇ.100ರಷ್ಟು ಸಾಧಿಸಿದ ಬ್ಯಾಂಕ್‌ಗಳಿಗೆ ಪ್ರಶಂಸನಾ ಪತ್ರವನ್ನು ನೀಡಲಾಗುವುದು ಎಂದು ಸಂಸದರು ತಿಳಿಸಿದರು. ವಿವಿಧ ಯೋಜನೆಗಳ ಆರ್ಥಿಕ ಸೌಲಭ್ಯಕ್ಕಾಗಿ ಸ್ವೀಕರಿಸಲಾದ ಅರ್ಜಿಗಳನ್ನು ಆದಷ್ಟು ಶೀಘ್ರ ವಿಲೇವಾರಿಗೆ ಕ್ರಮ ವಹಿಸಬೇಕು. ಪಿಎಂ ಸ್ವನಿಧಿ ಯೋಜನೆಯ ಯಶಸ್ವಿಗೆ ಒತ್ತು ನೀಡಬೇಕೆಂದು ತಿಳಿಸಿದ ಸಂಸದರು, ಬ್ಯಾಂಕ್‌ಗಳ ವಿಶ್ವಾಸಾರ್ಹತೆ ಹೆಚ್ಚಾಗುವ ರೀತಿಯಲ್ಲಿ ಬ್ಯಾಂಕ್ ಅಧಿಕಾರಿ ಹಾಗೂ ಸಿಬ್ಬಂದಿಗಳು ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸಿ ನಡೆದುಕೊಳ್ಳಬೇಕು. ಮೈಕ್ರೋ ಫೈನಾನ್ಸ್ ಸಂಸ್ಥೆಗಳು ಸರಕಾರ ಜಾರಿಗೆ ತಂದಿರುವ ನಿಯಮಾವಳಿಗಳನ್ನು ತಪ್ಪದೇ ಪಾಲಿಸಬೇಕು ಹಾಗೂ ಸಾಲ ವಸೂಲಾತಿ ಮಾಡುವಾಗ ಮಾನವೀಯತೆಯಿಂದ ವರ್ತಿಸಬೇಕು ಎಂದು ಸಂಸದ ಬಸವರಾಜ ಬೊಮ್ಮಾಯಿ ಸೂಚಿಸಿದರು.




ಲೀಡ್ ಬ್ಯಾಂಕ್ ಮ್ಯಾನೇಜರ್ ಸಂತೋಷ್ ಎಂ.ವಿ ಮಾತನಾಡಿ, ಜಿಲ್ಲೆಯಲ್ಲಿ ಲೀಡ್ ಬ್ಯಾಂಕ್‌ನ 182 ಶಾಖೆಗಳು ಕಾರ್ಯನಿರ್ವಹಿಸುತ್ತಿವೆ. ಡಿಸೆಂಬರ್ 2024ರವರೆಗೆ ಜಿಲ್ಲೆಯ ಸಾಲ ಠೇವಣಿ ಅನುಪಾತ ಶೇ.95.94 ಆಗಿರುತ್ತದೆ. ಎಲ್ಲ ಬ್ಯಾಂಕಿನ ನಿಯಂತ್ರಣಾಧಿಕಾರಿಗಳು ಸಾಲ ಠೇವಣಿ ಅನುಪಾತವನ್ನು ಸುಧಾರಿಸಲು ಶಾಖೆಗಳಿಗೆ ನಿರ್ದೇಶನ ನೀಡಲಾಗಿದೆ ಎಂದು ತಿಳಿಸಿದರು.

ಇದೇ ಸಂದರ್ಭದಲಿ ್ಲ ಪೊಟೆನ್ಷಿಯಲ್ ಲಿಂಕ್ಡ್ ಕ್ರೆಡಿಟ್ ಪ್ಲಾನ್ ಕೈಪಿಡಿ ಬಿಡುಗಡೆ ಮಾಡಲಾಯಿತು. ಸಭೆಯಲ್ಲಿ ಎಪಿವೈ, (ಅಟಲ್ ಪೆನ್ಷನ್ ಯೋಜನೆ), ಪಿಎಂಎಸ್‌ಬಿವೈ–ಪ್ರಧಾನ ಮಂತ್ರಿ ಸುರಕ್ಷಾ ಬಿಮಾ ಯೋಜನೆ, ಪಿಎಂಜೆಜೆಬಿವೈ, ಎಸ್‌ಎಸ್‌ಎ ಸೇರಿದಂತೆ ವಿವಿಧ ಯೋಜನೆಗಳ ಪ್ರಗತಿ ಪರಿಶಿಲನೆ ನಡೆಸಲಾಯಿತು.

ಸಭೆಯಲ್ಲಿ ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ನಬಾರ್ಡ್‌ನ ಎಜಿಎಂ ಮಹಾದೇವ ಕೀರ್ತಿ, ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ ಜಿ.ಎಚ್, ಕೌಶಲ್ಯಾಭಿವೃದ್ಧಿ ಇಲಾಖೆ ಅಧಿಕಾರಿ ಮಲ್ಲೂರ ಬಸವರಾಜ, ವಿವಿಧ ಬ್ಯಾಂಕ್‌ನ ಅಧಿಕಾರಿಗಳು ಇದ್ದರು.

ಜಿಲ್ಲೆಯಲ್ಲಿ ಪ್ರಸಕ್ತ ವಾರ್ಷಿಕ ಸಾಲ ಯೋಜನೆಯಡಿ 31–12–2024ರವರೆಗೆ ಕೃಷಿ ಸೇರಿದಂತೆ ಆದ್ಯತಾ ವಲಯಕ್ಕೆ 355753.07 ಲಕ್ಷ ರೂ. ಸಾಲ ನೀಡಿಕೆಯಾಗಿದೆ. ತಾಲೂಕಾವಾರು ಗದಗ – 139477.48, ಗಜೇಂದ್ರಗಡ–19644.04, ಲಕ್ಷ್ಮೇಶ್ವರ – 18247.06, ಮುಂಡರಗಿ–35779.63, ನರಗುಂದ–41351.17, ರೋಣ–68664.84, ಶಿರಹಟ್ಟಿ–32588.85 ಲಕ್ಷ ರೂ ಸಾಲ ನೀಡಿಕೆಯಾಗಿದೆ ಎಂದು ಸಭೆಗೆ ಅಧಿಕಾರಿಗಳು ವಿವರಿಸಿದರು.

# ವಿಜೃಂಭಣೆಯ ಕುಮಾರೇಶ್ವರರ ರಥೋತ್ಸವ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಶುಕ್ರವಾರ ಸಂಜೆ 5.30ಕ್ಕೆ ಸಹಸ್ರಾರು ಭಕ್ತರ ಮಧ್ಯೆ ಹಾನಗಲ್ಲ ಗುರು ಕುಮಾರೇಶ್ವರರ ಮಹಾರಥೋತ್ಸವವು ಸಡಗರ, ಸಂಭ್ರಮದಿಂದ ಜರುಗಿತು.

ಕಳೆದ ಆರು ದಿನಗಳಿಂದ ಶ್ರೀಮಠವು ವೈಶಿಷ್ಟ್ಯಪೂರ್ಣ ಪುಣ್ಯ ಸ್ಮರಣೋತ್ಸವ ಹಾಗೂ ನುಡಿಹಬ್ಬ ಆಚರಿಸಿದ ಹಿನ್ನೆಲೆ ಈ ವರ್ಷ ಶ್ರೀಮಠ ಜನಸಾಗರದಿಂದ ತುಂಬಿ ತುಳುಕುತ್ತಿತ್ತು. ಸುತ್ತಮುತ್ತಲ ಪ್ರದೇಶಗಳಾದ ಅಬ್ಬಿಗೇರಿ, ರೋಣ, ಕೊತಬಾಳ, ಸೂಡಿ, ನಿಡಗುಂದಿ, ಜಕ್ಕಲಿ, ಹಾಲಕೆರೆ, ನಿಡಗುಂದಿ, ಯಲಬುರ್ಗಾ, ಕುಕನೂರ, ಕೊಪ್ಪಳ, ಗದಗ, ಮುಂಡರಗಿ ಯನ್ನೊಳಗೊಂಡಂತೆ ನಾಡಿನ ವಿವಿಧ ಮೂಲೆಯಿಂದ ಜನಸಾಗರ ಹರಿದುಬಂದಿತ್ತು.



ಯಲಬುರ್ಗಾ ತಾಲೂಕಿನ ಬಿನ್ನಾಳ ಗ್ರಾಮದ ಸದ್ಭಕ್ತರು ತೇರಿನ ಕಳಸದೊಂದಿಗೆ ಭಜನೆ, ಡೊಳ್ಳು, ಕಹಳೆ ಹಾಗೂ ವಿವಿಧ ವಾದ್ಯ ಮೇಳಗಳೊಂದಿಗೆ ಆಗಮಿಸಿದರೆ, ಮುಧೋಳ ಗ್ರಾಮದ ಸದ್ಭಕ್ತರು ಪಾಲಕಿ ಹಾಗೂ ನಂದಿಕೋಲಿನೊಂದಿಗೆ ಆಗಮಿಸಿದ್ದರು. ಮಾರನಬಸರಿ ಗ್ರಾಮದ ಸದ್ಭಕ್ತರು ಸಕಲ ವಾದ್ಯ ಮೇಳಗಳೊಂದಿಗೆ ತೇರಿನ ಹಗ್ಗದೊಂದಿಗೆ ಆಗಮಿಸಿದರೆ, ನಿಡಗುಂದಿ ಗ್ರಾಮದ ಸದ್ಭಕ್ತರು ಕುಮಾರೇಶ್ವರರ ಭಾವಚಿತ್ರ ಮೆರವಣಿಗೆಯೊಂದಿಗೆ ಆಗಮಿಸುವ ಮೂಲಕ ರಥೋತ್ಸವದಲ್ಲಿ ಭಾಗಿಯಾಗಿದ್ದರು.

ಜಾತ್ರಾಮಹೋತ್ಸವದ ಅಂಗವಾಗಿ ಶುಕ್ರವಾರ ಬೆಳಿಗ್ಗೆ 6 ಗಂಟೆಗೆ ಕರ್ತೃ ಗದ್ದುಗೆಗೆ ರುದ್ರಾಭಿಷೇಕ, ವಿಶೇಷ ಪೂಜೆ ಕಂಕೈರ್ಯಗಳು ಜರುಗಿದವು.


### ಇನ್ಫೋಸಿಸ್ ಪ್ರತಿಷ್ಠಾನದಿಂದ ನಡೆಯುತ್ತಿರುವ 'ಪುಲಿಗೆರೆ ಉತ್ಸವ'

# ಶ್ರೀ ಸೋಮೇಶ್ವರನ ಪಲ್ಲಕ್ಕಿ ಮೆರವಣಿಗೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಇನ್ಫೋಸಿಸ್ ಪ್ರತಿಷ್ಠಾನದಿಂದ ನಡೆಯುತ್ತಿರುವ 'ಪುಲಿಗೆರೆ ಉತ್ಸವ'ದ ಅಂಗವಾಗಿ ಶುಕ್ರವಾರ ಗೋಧೂಳಿ ಸಮಯದಲ್ಲಿ ಪುಲಿಗೆರೆಯ ಆರಾಧ್ಯ ದೈವ ಶ್ರೀ ಸೋಮೇಶ್ವರನ ಉತ್ಸವ ಮೂರ್ತಿಯನ್ನಿರಿಸಿದ ಪಲ್ಲಕ್ಕಿ ಮೆರವಣಿಗೆ ಸಕಲ ವಾದ್ಯ–ವೈಭವಗಳೊಂದಿಗೆ ಅದ್ದೂರಿಯಾಗಿ ನೆರವೇರಿತು. ಕೊಣ್ಣೂರಿನ ರಾಯಣ್ಣ ಮಹಿಳಾ ಡೊಳ್ಳು ಮೇಳ, ನಂದಿಕೋಲು ಕುಣಿತ, ವಾದ್ಯಮೇಳಗಳು ಮೆರವಣಿಗೆ ರಂಗು ಹೆಚ್ಚಿಸಿದ್ದವು.

ದೇವಸ್ಥಾನದಿಂದ ಪ್ರಮುಖ ಬೀದಿಗಳ ಮೂಲಕ ಸಾಗಿದ ಮೆರವಣಿಗೆ ಸಾಗಿತು. ಮಾರ್ಗದಲ್ಲಿ ಜನತೆ ತಮ್ಮ ಮನೆಯ ಮುಂಭಾಗ ಸ್ವಚ್ಛಗೊಳಿಸಿ ರಂಗೋಲಿ ಹಾಕಿ ಶೃಂಗರಿಸುವ ಮೂಲಕ ಶ್ರೀ ಸೋಮೇಶ್ವರನಿಗೆ ಭಕ್ತಿಯಿಂದ ನಮಿಸಿದರು. ಅಲಂಕೃತ ಪಲ್ಲಕ್ಕಿಯಲ್ಲಿ ಶ್ರೀ ಸೋಮೇಶ್ವರನ ಮೂರ್ತಿಯನ್ನಿರಿಸಿ ಜಾಗಟೆ ಗಂಟೆಗಳ ನಾದ, ಉದ್ಘೋಷಗಳೊಂದಿಗೆ ಪಲ್ಲಕ್ಕಿ ಮೆರವಣಿಗೆ ಪಟ್ಟಣದ ಮುಖ್ಯ ಬಜಾರ್ ಸೇರಿ ಪ್ರಮುಖ ಸ್ಥಳಗಳಲ್ಲಿ ಸಾಗಿ ದೇವಸ್ಥಾನದಲ್ಲಿ ಸಂಪನ್ನಗೊಂಡಿತು.



ಮೆರವಣಿಗೆಯಲ್ಲಿ ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಕಮಿಟಿ ಅಧ್ಯಕ್ಷ ಚಂಬಣ್ಣ ಬಾಳಿಕಾಯಿ, ಭಾರತೀಯ ವಿದ್ಯಾಭವನದ ಜಂಟಿ ನಿರ್ದೇಶಕಿ ನಾಗಲಕ್ಷ್ಮಿ ಕೆ.ರಾವ್, ಜ್ಯೋತಿ ಬಾಳಿಹಳ್ಳಿಮಠ, ಪ್ರಭಾ ಪುರಾಣಿಕಮಠ, ದಿವ್ಯಾ ಬಾಳೆಹಳ್ಳಿಮಠ, ಪರಮೇಶ್ವರಿ ಪುರಾಣಿಕಮಠ, ಎಸ್.ಪಿ. ಪಾಟೀಲ, ನೀಲಪ್ಪ ಕರ್ಜಕಣ್ಣವರ, ಬಸವರಾಜ ಮೆಣಸಿನಕಾಯಿ, ಶಿವಯೋಗಿ ಅಂಕಲಕೋಟಿ, ನಿಂಗಪ್ಪ ತಹಸೀಲ್ದಾರ, ಜಿ.ಜಿ. ಹಾಲೇವಾಡಿಮಠ, ಈರಣ್ಣ ಅಂಕಲಕೋಟಿ, ಎಸ್.ಪಿ. ಪಾಟೀಲ, ವೆಂಕಟೇಶ ಮಾತಾಡೆ, ಗುರುಶಾಂತಯ್ಯ ಬಾಳಿಹಳ್ಳಿಮಠ, ಎಮ್. ಕೆ. ಕಳ್ಳಿಮಠ, ಈರಣ್ಣ ಮುಳಗುಂದ, ಕಾಶಪ್ಪ ಮುಳಗುಂದ, ಶಿದ್ದಪ್ಪ ಬೆಲ್ಲದ, ರಾಘವೇಂದ್ರ ಪೂಜಾರ, ಸಮೀರ ಪೂಜಾರ, ಸೋಮಪ್ಪ ತಂಡಿಗೇರ ದೇವಸ್ಥಾನ ಭಕ್ತರ ಸಮಿತಿ ಸದಸ್ಯರು, ಮುಖಂಡರು, ಭಕ್ತರು ಪಾಲ್ಗೊಂಡಿದ್ದರು.

**ಪುಲಿಗೆರೆ ಉತ್ಸವದಲ್ಲಿಂದು**

ಫೆ.22ರ ಉದಯರಾಗ–2: ಬೆಳಿಗ್ಗೆ 6ಕ್ಕೆ ಗದಗನ ರಾಜೀವ ಈಶ್ವರ ಹಿರೇಮಠ ಅವರಿಂದ ಸಿತಾರ್ ವಾದನ, 7ಕ್ಕೆ ಡಾ. ಶಿವಬಸಯ್ಯ ಗಡ್ಡದಮಠ ಮತ್ತು ಸಹ ಕಲಾವಿದರಿಂದ ಹಿಂದೂಸ್ತಾನಿ ಗಾಯನ, ಸಂಜೆ 6ಕ್ಕೆ ಅರ್ಚನಾ ಕಾಮತ್ ಮತ್ತು ತಂಡದಿಂದ ಹಿಂದೂಸ್ತಾನಿ ಗಾಯನ, 7ಕ್ಕೆ ಬೆಂಗಳೂರಿನ ಕೌಶಲ್ಯ ನಿವಾಸ್ ತಂಡದಿಂದ ನೃತ್ಯ ನಾಟಕ, ರಾತ್ರಿ 8.30ಕ್ಕೆ ಸ್ಥಳೀಯ ಕಲಾವಿದೆ ಭವ್ಯ ಕತ್ತಿ ತಂಡದಿಂದ ಭರತನಾಟ್ಯ ಪ್ರದರ್ಶನವಿದೆ.

### ಹೆಣ್ಣು ಮಕ್ಕಳಿಗೆ ಗೌರವ ಕೊಡುವಲ್ಲಿ ರಾಜ್ಯ ಸರ್ಕಾರ ವಿಫಲ: ಬಸವರಾಜ ಬೊಮ್ಮಾಯಿ ಆರೋಪ

# ರಾಜಕೀಯ ಲಾಭಕ್ಕಾಗಿ ಗ್ಯಾರಂಟಿ ಯೋಜನೆ ಜಾರಿ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜಕೀಯ ಲಾಭಕ್ಕಾಗಿ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದು, ಹೆಣ್ಣು ಮಕ್ಕಳಿಗೆ ಗೌರವ ಕೊಡುವಲ್ಲಿ ರಾಜ್ಯ ಸರ್ಕಾರ ವಿಫಲವಾಗಿದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಆರೋಪಿಸಿದರು.

ಗದುಗಿನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಗ್ಯಾರಂಟಿ ಯೋಜನೆಗಳು ರಾಜಕೀಯ ಲಾಭಕ್ಕಾಗಿ, ಮತಕ್ಕಾಗಿ ಮಾಡಿದ ಯೋಜನೆಗಳಾಗಿವೆ. ಜನರಿಗೆ, ತಾಯಂದಿರಿಗೆ ಕಣ್ಣಲ್ಲಿ ಮಣ್ಣು ಹಾಕುವ ಯೋಜನೆ. ಗೃಹಲಕ್ಷ್ಮೀ ಹಣ ಸರಿಯಾಗಿ ಯಾವ ತಿಂಗಳೂ ಬಂದಿಲ್ಲ. ಪ್ರತಿ ತಿಂಗಳು ಕೊಟ್ಟಿಲ್ಲ ಅಂದರೆ ಹೆಣ್ಣು ಮಕ್ಕಳಿಗೆ ಗೌರವ ಕೊಡುವಲ್ಲಿ ರಾಜ್ಯ ಸರ್ಕಾರ ವಿಫಲವಾಗಿದೆ ಎಂದು ದೂರಿದರು.

ರಾಜ್ಯದಲ್ಲಿ ಹಣಕಾಸಿನ ವ್ಯವಸ್ಥೆ ಸಂಪೂರ್ಣ ನೆಲಕಚ್ಚಿದೆ. ಮುಖ್ಯಮಂತ್ರಿಗಳು ಭಂಡತನದಿಂದ ಒಪ್ಪಿಕೊಳ್ಳುತ್ತಿಲ್ಲ. ಕೇವಲ ಗ್ಯಾರಂಟಿಗೆ ಅಷ್ಟೆ ಅಲ್ಲ, ಯಾವುದೇ ಅಭಿವೃದ್ಧಿಗೂ ಹಣ ಇಲ್ಲ. ಸಾಲದ ರೂಪದ ಯೋಜನೆಗಳನ್ನು ಬಿಟ್ಟರೆ ಯಾವುದೂ ಇಲ್ಲ. ಕುಡಿಯುವ ನೀರಿನ ಯೋಜನೆಗೆ ಹಣ ಕೊಡದೇ ಕುಂಠಿತವಾಗಿದೆ. ರಾಜ್ಯ ಸರ್ಕಾರ ಜನರನ್ನು ಸಂಕಷ್ಟಕ್ಕೆ ದೂಡುತ್ತಿದೆ. ಜನ ಸಾಮಾನ್ಯರು ಬಳಸುವ ಎಲ್ಲ ವಸ್ತುಗಳ ಬೆಲೆಯೂ ಏರಿಕೆಯಾಗಿದೆ. ತೆರಿಗೆ ಪಡೆದು ಅದನ್ನೇ ಗ್ಯಾರಂಟಿ ರೂಪದಲ್ಲಿ ಮರಳಿ ಕೊಡುಲು ಮುಂದಾಗಿದೆ. ಆದರೆ, ಅದರಲ್ಲೂ ರಾಜ್ಯ ಸರ್ಕಾರ ಸಂಪೂರ್ಣವಾಗಿ ವಿಫಲವಾಗಿದೆ ಎಂದರು.



ಇವರಿಗೆ ಅಭಿವೃದ್ಧಿ ಮಾಡಲು ಮನಸ್ಸಿಲ್ಲ. ಹೀಗಾಗಿ ಕಾಂಗ್ರೆಸ್ ವೈಫಲ್ಯ ಮುಚ್ಚಿಹಾಕಲು ಉದಯಗಿರಿ ಗಲಾಟೆ, ಆತಂಕಕಾರಿ ಗಲಭೆ ಸೃಷ್ಟಿಸುವ ಪ್ರಯತ್ನ ಮಾಡುತ್ತಿದ್ದಾರೆ. ಹಿಜಾಬ್ ವಿಷಯವಾಗಿ ಹೈಕೋರ್ಟ್ ಆದೇಶ ಕೊಟ್ಟಿದೆ. ಸುಪ್ರೀಂ ಕೋರ್ಟ್‌ನಲ್ಲಿ ಕೇಸ್ ಇದೆ. 1980ರ ಶಿಕ್ಷಣ ನೀತಿಯ ಪ್ರಕಾರ ಸಮವಸ್ತ್ರ ಒಪ್ಪಿಕೊಳ್ಳಲಾಗಿದೆ. ಹಿಜಾಬ್, ಮತ್ತೊಂದು ತರುವ ಯೋಚನೆ ಮಾಡಲಾಗುತ್ತಿದೆ. ಕೆಲವು ಸಂಘಟನೆಗಳು ಹಿಜಾಬ್ ತರಲು ಮುಂದಾಗಿದ್ದು, ಸರ್ಕಾರದ ಕುಮ್ಮಕ್ಕು ನೀಡುತ್ತಿದೆ ಎಂದು ಆರೋಪಿಸಿದರು.

ವಿಶ್ವವಿದ್ಯಾಲಯ ಉಳಿಸಿ ಹೋರಾಟ ತೀವ್ರಗೊಂಡಿದೆ. ಹಳೆಯ ವಿಶ್ವವಿದ್ಯಾಲಯಗಳು ಬಿಳಿ ಆನೆಗಳಾಗಿ ಪರಿವರ್ತನೆಗೊಂಡಿವೆ. ನೂರಾರು ಕೋಟಿ ಖರ್ಚು ಮಾಡುತ್ತಾರೆ. ಆದರೆ ಅಲ್ಲಿ ಸರಿಯಾಗಿ ಪರೀಕ್ಷೆ ನಡೆಯುತ್ತಿಲ್ಲ. ಸಂಶೋಧನೆ ಆಗುತ್ತಿಲ್ಲ. ಯಾವುದೇ ಕೆಲಸ ಆಗುತ್ತಿಲ್ಲ. ಅವು ಭ್ರಷ್ಟಾಚಾರದ ಕೂಪಗಳಾಗಿವೆ. ಅದನ್ನು ಸರಿಪಡಿಸುವುದನ್ನು ಬಿಟ್ಟು ಹೊಸ ವಿಶ್ವವಿದ್ಯಾಲಯ ಬಂದ್ ಮಾಡುತ್ತಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಅತೀ ಕಡಿಮೆ ವೆಚ್ಚದಲ್ಲಿ ಸ್ಥಳೀಯ ವಿದ್ಯಾರ್ಥಿಗಳಿಗೆ ಶಿಕ್ಷಣ ನೀಡಲಾಗುತ್ತಿತ್ತು. ವಿಶೇಷವಾಗಿ ಎಸ್‌ಸಿ–ಎಸ್‌ಟಿ, ಒಬಿಸಿ ಹೆಣ್ಣುಮಕ್ಕಳು ದೊಡ್ಡಮಟ್ಟದಲ್ಲಿ ವಿವಿಯಲ್ಲಿ ನೋಂದಾಯಿತರು. ಇವರ ಭವಿಷ್ಯಕ್ಕೆ ದೊಡ್ಡಮಟ್ಟದ ಕೊಡಲಿ ಪೆಟ್ಟು ಕೊಟ್ಟಿದ್ದಾರೆ. ಹೊಸ ವಿಶ್ವವಿದ್ಯಾಲಯ ಮುಚ್ಚಲು ಬಿಡುವುದಿಲ್ಲ. ಕಾನೂನು ಹೋರಾಟ ಮಾಡುತ್ತೇವೆ ಎಂದು ಬಸವರಾಜ ಬೊಮ್ಮಾಯಿ ಹೇಳಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka